ಸಂಪಾದಕರು : ಎ.ಕೆ ಮಲ್ಲಿಕಾರ್ಜುನ ▪ ಸಂಪುಟ : 01 ▪ ಸಂಚಿಕೆ : 31 ▪ ಪುಟ : 04 ▪ ಬೆಲೆ : 02 ▪ 07-07-2026 ▪ ಮಂಗಳವಾರ ▪ ಬಳ್ಳಾರಿ

ಕನ್ನಡ ದಿನಪತ್ರಿಕೆ

# ಗಣಿನಾಡ ವಾಣಿ

GANINAADA VAANI

E-mail : ganinaadavaani@gmail.com RNI No: KNKAN/26/A0397

ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹೀರಾತುಗಳಿಗಾಗಿ ಸಂಪರ್ಕಿಸಿ
9743034347
9900966891

2 ಮಹಾ ವರುಣ ಯಾಗ ಯಶಸ್ವಿ : ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ ಎಂದು ವಿಶೇಷ ಪ್ರಾರ್ಥನೆ

3 ರೈತರ ಜೋಳದ ಖರೀದಿ ಬಾಕಿ ಹಣ ಬಿಡುಗಡೆಗೆ ಆಗ್ರಹ

4 ಆಗಸ್ಟ್ ಅಂತ್ಯಕ್ಕೆ ಚಿತ್ರದುರ್ಗ ಶಾಖಾ ಕಾಲುವೆ ಪ್ರಾಯೋಗಿಕ ಚಾಲನೆ

# ಕುಡಿಯುವ ನೀರು,ಮಳೆ ಕೊರತೆ ಎದುರಿಸಲು ಸೂಕ್ತ ಕಾರ್ಯಯೋಜನೆ ರೂಪಿಸಿ

## ಬಳ್ಳಾರಿ : ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ ನಿರ್ದೇಶನ

▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಜಿಲ್ಲೆಯಲ್ಲಿ ಕುಡಿಯುವ ನೀರು ಮತ್ತು ಮಳೆ ಕೊರತೆಯಿರುವ ಪ್ರದೇಶಗಳಲ್ಲಿ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಸೂಕ್ತ ಕಾರ್ಯ ಯೋಜನೆ ರೂಪಿಸಬೇಕು ಎಂದು ಪ್ರವಾಸೋದ್ಯಮ ಇಲಾಖೆ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಜಿಪಂ ಆಡಳಿತಾಧಿಕಾರಿಯೂ ಆದ ಡಾ.ಕೆ.ವಿ. ತ್ರಿಲೋಕಚಂದ್ರ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಸಾಮಾನ್ಯ ಸಭೆ ಹಾಗೂ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ (20 ಅಂಶಗಳು ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ನೀರಾವರಿ ವ್ಯವಸ್ಥೆಯ ಒಟ್ಟು ವಿಸ್ತೀರ್ಣದಲ್ಲಿ 10,000 ಹೆಕ್ಟೇರ್ ಪ್ರದೇಶವು ಕೊಳವೆಬಾವಿ ನೀರಾವರಿ ಆಧಾರಿತವಾಗಿದೆ. ಉಳಿದ 41,141 ಹೆಕ್ಟೇರ್ ಪ್ರದೇಶವು ಸಂಪೂರ್ಣವಾಗಿ ಕಾಲುವೆ ನೀರಾವರಿ ವ್ಯವಸ್ಥೆಯ ಮೇಲೆ ಅವಲಂಬಿತವಾಗಿದೆ ಎಂದು ನೀರಾವರಿ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಮಾತನಾಡಿ, ಕೆಲವು ಕೊಳವೆಬಾವಿಗಳು ಕೇವಲ ನೀರಿನ ಕೊರತೆಯಿಂದಷ್ಟೇ ಅಲ್ಲದೆ, ವಿದ್ಯುತ್ ಸಂಪರ್ಕದ ದೋಷ ಅಥವಾ ಪಂಪ್ ಸೆಟ್ ಕೆಟ್ಟುಹೋಗಿರುವುದರಿಂದ ಕೆಲಸ ಮಾಡುತ್ತಿರುವುದಿಲ್ಲ. ಇಂತಹ ಸಮಸ್ಯೆಗಳನ್ನು ಟಾಸ್ಕ್ ಫೋರ್ಸ್ ಮೂಲಕ ತಕ್ಷಣವೇ ಬಗೆಹರಿಸಬೇಕು. ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯು ಇದರ ಉಸ್ತುವಾರಿ ನೋಡಿಕೊಳ್ಳುತ್ತಿದ್ದು, ಇಒಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಹಾಗೂ ಅಗತ್ಯವಿದ್ದಲ್ಲಿ ಬದಲಾವಣೆಗಳನ್ನು ಮಾಡಲು ಮುಕ್ತ ಅವಕಾಶವಿದೆ ಎಂದು ತಿಳಿಸಿದರು.



ತಾಲೂಕುಗಳಲ್ಲಿ ಕೃಷಿ ನೀರಾವರಿ ಮತ್ತು ಕುಡಿಯುವ ನೀರಿನ ಬೋರ್‌ವೆಲ್‌ಗಳ ಸ್ಥಿತಿಗತಿಯನ್ನು ತಕ್ಷಣವೇ ಪರಿಶೀಲಿಸಬೇಕು. ಕೆಟ್ಟುಹೋಗಿರುವ ಪಂಪ್‌ಗಳನ್ನು ಹಾಗೂ ವಿದ್ಯುತ್ ಸಂಪರ್ಕದ ಸಮಸ್ಯೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ಬೋರ್‌ವೆಲ್‌ಗಳ ದುರಸ್ತಿ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ತಕ್ಷಣವೇ ಸೂಕ್ತ ವರದಿ ನೀಡಿ, ಕೆಲಸ ಆರಂಭಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ತಾಲೂಕು ಮಟ್ಟದಲ್ಲಿ ತಹಶೀಲ್ದಾರ್, ಇಒ ಮತ್ತು ಕೃಷಿ, ತೋಟಗಾರಿಕೆ ಹಾಗೂ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿಗಳು ಒಟ್ಟಿಗೆ ಕುಳಿತು ಆಯಾ ತಾಲೂಕುಗಳಲ್ಲಿ ಎಷ್ಟು ಕೊಳವೆಬಾವಿಗಳಿವೆ? ಅವುಗಳಲ್ಲಿ ಕುಡಿಯುವ ನೀರಿಗೆ ಎಷ್ಟು, ಕೃಷಿ ನೀರಾವರಿಗೆ ಎಷ್ಟು ಮತ್ತು ಎರಡಕ್ಕೂ ಬಳಕೆಯಾಗುತ್ತಿರುವ ಕೊಳವೆಬಾವಿಗಳು ಎಷ್ಟು ಎಂಬ ಸಂಪೂರ್ಣ ಮಾಹಿತಿ ಸಿದ್ಧಪಡಿಸಬೇಕು. ಮುಂಬರುವ ದಿನಗಳಲ್ಲಿ ಮಳೆಯ ಕೊರತೆಯಿಂದಾಗಿ ಇನ್ನು ಎಷ್ಟು ಕೊಳವೆಬಾವಿಗಳು ಬತ್ತಿ ಹೋಗಬಹುದು ಎಂಬುದನ್ನು ಮುಂಚಿತವಾಗಿಯೇ ಊಹಿಸಿ, ಅದಕ್ಕೆ ತಕ್ಕಂತೆ ಸೂಕ್ತ ಯೋಜನೆಗಳನ್ನು ರೂಪಿಸಬೇಕು.

ಡಾ. ಕೆ.ವಿ. ತ್ರಿಲೋಕಚಂದ್ರ , ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ

### ರಕ್ತಹೀನತೆ (ಅನಿಮಿಯಾ) ಮುಕ್ತ ತಾಲೂಕುಗಳಿಗೆ ಆದ್ಯತೆ

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಅಂಗನವಾಡಿ ಮತ್ತು ಶಾಲಾ ಮಕ್ಕಳಲ್ಲಿ ಕಂಡುಬರುತ್ತಿರುವ ರಕ್ತಹೀನತೆಯ ಪ್ರಮಾಣವನ್ನು ಆತಂಕ ವ್ಯಕ್ತಪಡಿಸಿದ ಉಸ್ತುವಾರಿ ಕಾರ್ಯದರ್ಶಿಯವರು, ಪ್ರಸ್ತುತ ಶೇ.30 ರಿಂದ 40 ಕ್ಕಿಂತ ಹೆಚ್ಚು ಮಕ್ಕಳಲ್ಲಿ ರಕ್ತಹೀನತೆ ಇರುವುದನ್ನು ಆರೋಗ್ಯ ಇಲಾಖೆಯ ವರದಿಯಲ್ಲಿ ಕಂಡುಬಂದಿರುತ್ತದೆ. ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಮಕ್ಕಳ ಆರೋಗ್ಯ ಸುಧಾರಣೆಯೂ ಅಷ್ಟೇ ಮುಖ್ಯವಾಗಿದ್ದು, ಇದರಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ಮಾಡಬಾರದು ಎಂದು ಅಧಿಕಾರಿಗಳಿಗೆ ಮುನ್ನೆಚ್ಚರಿಕೆ ನೀಡಿದರು.ಶಾಲಾ/ಪದವಿ ಶಿಕ್ಷಣ ಇಲಾಖಾ ವತಿಯಿಂದ ತಿಂಗಳಿಗೆ ಲಕ್ಷಾಂತರ ರೂ. ವರೆಗೆ ಬಾಡಿಗೆ ಪಾವತಿಸುತ್ತಿರುವ ಶಾಲಾ/ಪದವಿ ವಸತಿ ನಿಲಯಗಳನ್ನು ತಕ್ಷಣವೇ ಸ್ವಂತ ಅಥವಾ ಪರ್ಯಾಯ ಕಟ್ಟಡಗಳಿಗೆ ಸ್ಥಳಾಂತರಿಸಗೊಳಿಸಬೇಕು. ಹೊಸ ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿದ್ದರೂ ಸ್ಥಳಾಂತರಗೊಳ್ಳದೆ ವಿಳಂಬ ಮಾಡಬಾರದು ಎಂದು ಸೂಚಿಸಿದರು.

ಮಳೆ ನೀರನ್ನು ಸಮರ್ಥವಾಗಿ ಬಳಸಿಕೊಳ್ಳಲು ಮತ್ತು ಅಂತರ್ಜಲ ವೃದ್ಧಿಸಲು ಇಂಗು ಗುಂಡಿಗಳನ್ನು ನಿರ್ಮಿಸಬೇಕು. ಈ ಕುರಿತು ಕೃಷಿ ವಿಸ್ತರಣಾಧಿಕಾರಿಗಳು ಸ್ಥಳೀಯ ರೈತ ಮುಖಂಡರು ಮತ್ತು ಸಾರ್ವಜನಿಕರೊಂದಿಗೆ ಸಭೆ ನಡೆಸಿ, ಜಾಗೃತಿ ಮೂಡಿಸಬೇಕು. ಅತಿ ಹೆಚ್ಚು ನೀರು ಬೇಡುವ ಬೆಳೆಗಳ ಬಳಕೆಯನ್ನು ಕಡಿಮೆ ಮಾಡಲು ಮತ್ತು ಲಭ್ಯವಿರುವ ನೀರನ್ನು ಮಿತವಾಗಿ ಬಳಸಲು ರೈತರಿಗೆ ಮಾರ್ಗದರ್ಶನ ನೀಡಬೇಕು. ಈ ಎಲ್ಲಾ ಪ್ರಕ್ರಿಯೆಗಳನ್ನು ಕೇವಲ ಕಾಗದದ ಮೇಲಷ್ಟೇ ಮಾಡದೇ, ವಾಸ್ತವಿಕ ಪರಿಸ್ಥಿತಿಗೆ ಅನುಗುಣವಾಗಿ ವರದಿಯನ್ನು ಸಿದ್ಧಪಡಿಸಿ ಸಲ್ಲಿಸಬೇಕು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 1.5 ಲಕ್ಷ ಜಾನುವಾರುಗಳಿದ್ದು, ಸುಮಾರು 71 ಸಾವಿರ ರೈತರು ಹೈನುಗಾರಿಕೆಯನ್ನೇ ನಂಬಿಕೊಂಡಿದ್ದಾರೆ. ಜಿಲ್ಲೆಯಲ್ಲಿ ಸದ್ಯಕ್ಕೆ ಮುಂದಿನ 34 ವಾರಗಳಿಗೆ ಆಗುವಷ್ಟು ಮೇವಿನ ದಾಸ್ತಾನು ಲಭ್ಯವಿದ್ದು, ಮುಂಬರುವ ದಿನಗಳಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಇಲಾಖೆಯು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಜಿಲ್ಲೆಯಲ್ಲಿ ರೈತರಿಂದ ಒಟ್ಟು 9,000 ಮೇವಿನ ಮಿನಿಕಿಟ್‌ಗಳಿಗೆ ಬೇಡಿಕೆ ಬಂದಿದ್ದು, ತ್ವರಿತವಾಗಿ ರೈತರಿಗೆ ಮಿನಿಕಿಟ್‌ಗಳನ್ನು ಪೂರೈಸಲಾಗುವುದು ಎಂದು ಪಶು ಸಂಗೋಪನೆ ಇಲಾಖಾಧಿಕಾರಿಗಳು ತಿಳಿಸಿದರು.

ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ನವಜಾತ ಶಿಶುಗಳ ತೀವ್ರ ನಿಗಾ ಘಟಕದಲ್ಲಿ ದಾಖಲಾಗುವ ಮಕ್ಕಳಿಗೆ ವೆಂಟಿಲೇಟರ್ ಸರ್ಕ್ಯೂಟ್ ಹಾಗೂ ಇತರೆ ಸೌಲಭ್ಯಗಳನ್ನು ಸಮರ್ಪಕವಾಗಿ ಇಟ್ಟುಕೊಂಡು ಸೂಕ್ಷ್ಮ ಪರಿಸ್ಥಿತಿಯಲ್ಲಿ ನಿರ್ವಹಣೆ ಮಾಡಬೇಕು. ಈ ಕುರಿತು ಆಸ್ಪತ್ರೆಗಳು ಮತ್ತು ಆರೋಗ್ಯ ಇಲಾಖೆ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರು, ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಶಾಲೆಗಳಲ್ಲಿ ವಿದ್ಯಾರ್ಥಿಗಳ ಕಲಿಕಾ ಪ್ರಗತಿ ಉತ್ತಮಗೊಳಿಸಲು ಪ್ರತಿ ಪಾಠದ ನಂತರ ವಿದ್ಯಾರ್ಥಿಗಳ ಮೌಲ್ಯಮಾಪನ ನಡೆಸಿ, ಆ ದತ್ತಾಂಶವನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಬೇಕು.

ಈ ದತ್ತಾಂಶದ ಸತ್ಯಾಸತ್ಯತೆಯನ್ನು ಖಚಿತಪಡಿಸಲು ಅಧಿಕಾರಿಗಳು ನೂತನವಾದ ತಂತ್ರಾಂಶಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಸ್ವತಃ ಶಾಲೆಗಳಿಗೆ ಭೇಟಿ ನೀಡಿ, ಮಕ್ಕಳೊಂದಿಗೆ ಸಂವಾದ ನಡೆಸಿ ಮಕ್ಕಳ ಕುಂದು-ಕೊರತೆಗಳನ್ನು ಪರಿಶೀಲಿಸಬೇಕು. ದತ್ತಾಂಶದ ವಿಶ್ವಾಸಾರ್ಹತೆಯನ್ನು ತಳಮಟ್ಟದಲ್ಲಿ ಪರೀಕ್ಷಿಸಲು ಬಿಆರ್‌ಪಿ, ಸಿಆರ್‌ಪಿ ಮತ್ತು ವಿಷಯ ಪರಿವೀಕ್ಷಕರನ್ನು ಒಳಗೊಂಡ ವಿಶೇಷ ತಂಡಗಳನ್ನು ರಚಿಸುವಂತೆ ತಿಳಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಕೆ.ಎಂ.ಇ.ಆರ್.ಸಿ ಅಡಿಯಲ್ಲಿ ಶಾಲಾ/ಪದವಿ ವಸತಿ ನಿಲಯಗಳ ಮೇಲ್ದರ್ಜೆಕರಣಕ್ಕೆ ಸಂಬಂಧಿಸಿದಂತೆ ಯೋಜನಾ ವರದಿಗಳನ್ನು ಶೀಘ್ರವಾಗಿ ಸಲ್ಲಿಸಬೇಕು. ಡಿ.ಪಿ.ಆರ್ ತಯಾರಿಸುವಾಗ ಕೇವಲ ಕನ್ಸಲ್ಟೆಂಟ್‌ಗಳ ಮೇಲೆ ಅವಲಂಬಿತರಾಗದೆ, ಎಂಜಿನಿಯರ್‌ಗಳು ಸ್ಥಳ ಪರಿಶೀಲನೆ ನಡೆಸಿ ನೈಜ ಅಗತ್ಯತೆಗಳಿಗೆ ತಕ್ಕಂತೆ ವರದಿ ಸಿದ್ಧಪಡಿಸಬೇಕು. ಈ ಪ್ರಕ್ರಿಯೆಯಲ್ಲಿ ವಸತಿ ನಿಲಯದ ವಾರ್ಡನ್‌ಗಳು ಮತ್ತು ವಿದ್ಯಾರ್ಥಿಗಳ ಸಲಹೆಗಳನ್ನು ಪರಿಗಣಿಸುವುದು ಕಡ್ಡಾಯವಾಗಿದೆ.

ಸ್ಮಾರ್ಟ್ ಕಿಚನ್ ಅಥವಾ ಇತರ ಸೌಲಭ್ಯಗಳ ಜೊತೆಗೆ ವಿದ್ಯಾರ್ಥಿಗಳಿಗೆ ಉಳಿದುಕೊಳ್ಳಲು ಅಗತ್ಯವಿರುವ ಕೊಠಡಿಗಳು ಮತ್ತು ಶೌಚಾಲಯಗಳ ನಿರ್ಮಾಣಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಶಾಲಾ/ಪದವಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿದ್ದು, ಸಾಮರ್ಥ್ಯಕ್ಕಿಂತ ಹೆಚ್ಚಿನ ದಾಖಲಾತಿ ಕಂಡುಬಂದಿದೆ. ಇದನ್ನು ಸರಿದೂಗಿಸಲು 'ಡಯಟ್' ಕಾಲೇಜುಗಳಲ್ಲಿ ಖಾಲಿ ಇರುವ ಕೊಠಡಿಗಳನ್ನು ಕನಿಷ್ಠ ವೆಚ್ಚದಲ್ಲಿ ದುರಸ್ತಿಗೊಳಿಸಿ, ಹೆಚ್ಚುವರಿ ವಸತಿ ವ್ಯವಸ್ಥೆಗೆ ಬಳಸಿಕೊಳ್ಳುವ ಸಾಧ್ಯತೆಗಳನ್ನು ಪರಿಶೀಲಿಸಬೇಕು.

ವಸತಿ ನಿಲಯಗಳ ಅಭಿವೃದ್ಧಿ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿಗಳ ಮೂಲಭೂತ ಸೌಕರ್ಯಗಳಿಗೆ ಮೊದಲ ಆದ್ಯತೆ ಇರಬೇಕು. ಸಾರ್ವಜನಿಕ ಹಣ ದುರ್ಬಳಕೆಯಾಗದಂತೆ ಮತ್ತು ಬಾಡಿಗೆ ಕಟ್ಟಡಗಳ ಮೇಲಿನ ಅನಗತ್ಯ ವೆಚ್ಚವನ್ನು ತಕ್ಷಣವೇ ತಡೆಗಟ್ಟಬೇಕು ಎಂಬುದು ಅವರ ಮನದಾಳದ ಇಚ್ಛೆಯಾಗಿರುತ್ತದೆ.

ಸಭೆಯಲ್ಲಿ ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್ ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಎಸ್‌ಐಆರ್ ಸಮೀಕ್ಷೆ ರದ್ದುಪಡಿಸಲು ಆಗ್ರಹ

# ಬಿಎಲ್‌ಓ ಅಧಿಕಾರಿಗಳನ್ನು ಕುರಿಗಳಿಗೆ ಹೋಲಿಸಿದ ಮಾಜಿ ಸಚಿವ ಬಿ. ಶ್ರೀರಾಮುಲು

▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ



ನಗರದ ಸಿರುಗುಪ್ಪ ರಸ್ತೆಯ ಹಾವಂಬಾವಿ ಪ್ರದೇಶದಲ್ಲಿರುವ ಬಿಜೆಪಿ ಹಿರಿಯ ಮುಖಂಡ ಹಾಗೂ ಮಾಜಿ ಸಚಿವ ಬಿ. ಶ್ರೀರಾಮುಲು ಅವರ ಗೃಹ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ, ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯುತ್ತಿದೆಯೇ ಎಂಬ ಗಂಭೀರ ಅನುಮಾನವಿದೆ ಎಂದು ಹೇಳಿದ ಅವರು, ಕೆಲ ಬಿಎಲ್‌ಓ ಅಧಿಕಾರಿಗಳು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಪಾಲಿಸದೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸಿದರು.

"ಮುಖ್ಯಮಂತ್ರಿಯವರ ಮಾತಿಗೆ ಕುರಿಗಳಂತೆ ತಲೆ ಆಡಿಸುತ್ತಿರುವ ಕೆಲ ಅಧಿಕಾರಿಗಳು ಚುನಾವಣಾ ಪ್ರಕ್ರಿಯೆಯ ಪಾವಿತ್ರ್ಯಕ್ಕೆ ಧಕ್ಕೆ ಉಂಟುಮಾಡುತ್ತಿದ್ದಾರೆ" ಎಂದು ಹೇಳುವ ಮೂಲಕ ಬಿಎಲ್‌ಓ ಅಧಿಕಾರಿಗಳನ್ನು ಕುರಿಗಳಿಗೆ ಹೋಲಿಸಿ ಟೀಕಿಸಿದರು.

ಕೆಲ ಅಧಿಕಾರಿಗಳು ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸುವ ಬದಲು ಶಾದಿ ಮಹಲ್‌ಗಳು ಹಾಗೂ ಸಮುದಾಯ ಭವನಗಳಲ್ಲಿ ಕುಳಿತು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸಿದ ಅವರು, ಇಂತಹ ರೀತಿಯಲ್ಲಿ ನಡೆದಿರುವ ಎಸ್‌ಐಆರ್ ಸಮೀಕ್ಷೆಯನ್ನು ಕೂಡಲೇ ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

ನಿಯಮ ಉಲ್ಲಂಘಿಸಿ ಕರ್ತವ್ಯ ನಿರ್ವಹಿಸಿರುವ ಬಿಎಲ್‌ಓ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು, ಅವರನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ಎಸ್‌ಐಆರ್ ಪ್ರಕ್ರಿಯೆಯ ಪಾವಿತ್ರ್ಯವನ್ನು ಹಾಳು ಮಾಡಿದ್ದು, ಚುನಾವಣಾ ವ್ಯವಸ್ಥೆಯನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದ ಅವರು, ಕಾಂಗ್ರೆಸ್ ಸರ್ಕಾರಕ್ಕೆ ದೇಶದ ಭದ್ರತೆಗಿಂತ ಚುನಾವಣೆ ಮುಖ್ಯವಾಗಿದೆ ಎಂದು ಟೀಕಿಸಿದರು.

ಅಕ್ರಮವಾಗಿ ದೇಶಕ್ಕೆ ಪ್ರವೇಶಿಸಿರುವ ಬಾಂಗ್ಲಾದೇಶಿ ವಲಸಿಗರಿಗೆ ಗುರುತಿನ ಚೀಟಿ ಒದಗಿಸುವ ಕಾರ್ಯಕ್ಕೆ ಕಾಂಗ್ರೆಸ್ ಸರ್ಕಾರ ಬೆಂಬಲ ನೀಡುತ್ತಿದೆ ಎಂದು ಆರೋಪಿಸಿದ ಶ್ರೀರಾಮುಲು, ಇಂತಹ ಕ್ರಮಗಳು ದೇಶದ ಭದ್ರತೆಗೆ ಅಪಾಯಕಾರಿಯಾಗಿವೆ ಎಂದು ಹೇಳಿದರು. ಕಾಂಗ್ರೆಸ್ ಪಕ್ಷವು ಹಿಂದಿನಿಂದಲೂ ಮತಬ್ಯಾಂಕ್ ರಾಜಕಾರಣಕ್ಕಾಗಿ ಇಂತಹ ನೀತಿಗಳನ್ನು ಅನುಸರಿಸುತ್ತ ಬಂದಿದೆ ಎಂದು ಆರೋಪಿಸಿದರು.

ಇದೇ ವೇಳೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು 2028ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುತ್ತದೆ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಶ್ರೀರಾಮುಲು, "ಎಸ್‌ಐಆರ್ ಪ್ರಕ್ರಿಯೆಯನ್ನು ದುರುಪಯೋಗಪಡಿಸಿಕೊಂಡು ಮತ್ತೆ ಅಧಿಕಾರಕ್ಕೆ ಬರಲು ಕಾಂಗ್ರೆಸ್ ಸರ್ಕಾರ ಪ್ರಯತ್ನಿಸುತ್ತಿದೆ. 2028ರಲ್ಲಿ ಅಧಿಕಾರಕ್ಕೆ ಬರುತ್ತೇವೆ ಎಂಬುದು ಅವರ ಹಗಲು ಕನಸು" ಎಂದು ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಮಹಾನಗರ ಪಾಲಿಕೆಯ ವಿರೋಧ ಪಕ್ಷದ ನಾಯಕ ಮೊತಕರ್ ಶ್ರೀನಿವಾಸ್, ವೀರಶೇಖರ್ ರೆಡ್ಡಿ, ಪಾಲಿಕೆ ಸದಸ್ಯರಾದ ಗುಡಿಗಂಟಿ ಹನುಮಂತ, ಒಬ್ಬೇಶ್, ಮಾಜಿ ಬುಡಾ ಅಧ್ಯಕ್ಷ ಪಾಲಣ್ಣ, ಕೆ.ಎಸ್. ಅಶೋಕ್ ಕುಮಾರ್, ವೆಂಕಟರಮಣ ರೆಡ್ಡಿ, ಹನುಮಂತಪ್ಪ, ಸಿದ್ದೇಶ್ ಸೇರಿದಂತೆ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

# ರಾಜ್ಯದ ಆದ್ಯತೆಯ ಪ್ರವಾಸಿ ತಾಣಗಳ ಆಯ್ಕೆಗೆ ಅಂತಿಮ ಚರ್ಚೆ

## ಹಂಪಿಯಲ್ಲಿ ಇಂದು ರಾಜ್ಯ ಮಟ್ಟದ ಸಮಾಲೋಚನಾ ಕಾರ್ಯಾಗಾರ

▪ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಕರ್ನಾಟಕವನ್ನು ಜಾಗತಿಕ ಮಟ್ಟದ ಪ್ರವಾಸೋದ್ಯಮ ತಾಣವಾಗಿ ರೂಪಿಸುವ ಮಹತ್ವಾಕಾಂಕ್ಷೆಯ ಯೋಜನೆಯ ಭಾಗವಾಗಿ, 'ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳ ಅಭಿವೃದ್ಧಿ' ಕುರಿತ ರಾಜ್ಯಮಟ್ಟದ ಸಮಾಲೋಚನಾ ಕಾರ್ಯಾಗಾರವನ್ನು ಜುಲೈ 07 ರಂದು ಹಂಪಿಯಲ್ಲಿ ಆಯೋಜಿಸಲಾಗಿದೆ.

ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಮಹತ್ವದ ಸಭೆಯಲ್ಲಿ, ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಜಂಟಿ ಕಾರ್ಯದರ್ಶಿಗಳಾದ ಸುವಾಶಿಷ್ ದಾಸ್, ಕರ್ನಾಟಕ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ.ಕೆ.ವಿ ತ್ರಿಲೋಕ್ ಚಂದ್ರ, ಆಯುಕ್ತರಾದ ಡಾ.ರಾಮ್ ಪ್ರಸಾತ್ ಮನೋಹರ್ ಸೇರಿದಂತೆ ಹಿರಿಯ ಅಧಿಕಾರಿಗಳು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ, ಜಂಗಲ್ ಲಾಡ್ಜ್ ಅಂಡ್ ರೆಸಾರ್ಟ್ಸ್, ಪ್ರವಾಸೋದ್ಯಮ ಕ್ಷೇತ್ರದ ಹೂಡಿಕೆದಾರರು, ಆತಿಥ್ಯ ಉದ್ಯಮದ ಪ್ರತಿನಿಧಿಗಳು,



ಪ್ರವಾಸೋದ್ಯಮ ತಜ್ಞರು ಹಾಗೂ ವಿವಿಧ ವಲಯಗಳ ಪ್ರಮುಖ ಹಿತಾಸಕ್ತಿದಾರರು ಭಾಗವಹಿಸಲಿದ್ದಾರೆ.

ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದ ಭವಿಷ್ಯದ ಬೆಳವಣಿಗೆಗೆ ಹೊಸ ದಿಕ್ಕು ನೀಡುವ ಉದ್ದೇಶದಿಂದ ಆಯೋಜಿಸಲಾಗಿರುವ ಈ ಕಾರ್ಯಾಗಾರದಲ್ಲಿ, ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲು ಆಯ್ಕೆ ಮಾಡಬೇಕಾದ ಪ್ರಮುಖ ತಾಣಗಳ ಕುರಿತು 360 ಡಿಗ್ರಿ ಸಮಗ್ರ ಚರ್ಚೆ ನಡೆಯಲಿದೆ.

"ಕರ್ನಾಟಕದಲ್ಲಿ ವಿಶ್ವದರ್ಜೆಯ ಪ್ರವಾಸೋದ್ಯಮ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ನಿಟ್ಟಿನಲ್ಲಿ ಇದು ಅತ್ಯಂತ ಮಹತ್ವದ ಸಮಾಲೋಚನಾ ಸಭೆಯಾಗಿದೆ. ಸರ್ಕಾರ, ಉದ್ಯಮ, ಹೂಡಿಕೆದಾರರು ಹಾಗೂ ಪ್ರವಾಸೋದ್ಯಮ ತಜ್ಞರನ್ನು ಒಂದೇ ವೇದಿಕೆಗೆ ತಂದು, ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸ್ಪಷ್ಟ ಕಾರ್ಯತಂತ್ರ ರೂಪಿಸಲಾಗುತ್ತದೆ. ಈ ಸಭೆಯಲ್ಲಿ ಕೈಗೊಳ್ಳುವ ನಿರ್ಧಾರಗಳು ಕರ್ನಾಟಕದ ಪ್ರವಾಸೋದ್ಯಮ ಕ್ಷೇತ್ರದ ಮುಂದಿನ ದಶಕದ ಬೆಳವಣಿಗೆಗೆ ಮಾರ್ಗದರ್ಶಿಯಾಗಲಿವೆ."

▪ ಕೆ.ಜೆ. ಜಾರ್ಜ್, ಇಂಧನ ಮತ್ತು ಪ್ರವಾಸೋದ್ಯಮ ಸಚಿವರು

ಪ್ರವಾಸಿ ತಾಣಗಳ ಆಯ್ಕೆಗೆ ಅಗತ್ಯ ಮಾನದಂಡಗಳು, ಮೂಲಸೌಕರ್ಯ ಅಭಿವೃದ್ಧಿ, ಪ್ರವಾಸಿಗರ ಅನುಭವ ಸುಧಾರಣೆ, ಖಾಸಗಿ ಹೂಡಿಕೆ ಅವಕಾಶಗಳು, ಪರಿಸರ ಸಂರಕ್ಷಣೆ, ಸ್ಥಳೀಯಸಮುದಾಯದಭಾಗವಹಿಸುವಿಕೆ, ಸಂಪರ್ಕ ವ್ಯವಸ್ಥೆ, ಬ್ರ್ಯಾಂಡಿಂಗ್, ಅಂತರರಾಷ್ಟ್ರೀಯ ಮಾರುಕಟ್ಟೆ ಹಾಗೂ ಸುಸ್ಥಿರ ಪ್ರವಾಸೋದ್ಯಮ ಮಾದರಿಗಳ ಕುರಿತು ವಿವಿಧ ತಜ್ಞರು ತಮ್ಮ ಅಭಿಪ್ರಾಯಗಳನ್ನು ಮಂಡಿಸಲಿದ್ದಾರೆ.

ಈ ಸಮಾಲೋಚನಾ ಸಭೆಯಲ್ಲಿ ವ್ಯಕ್ತವಾಗುವ ಅಭಿಪ್ರಾಯಗಳು ಹಾಗೂ ಶಿಫಾರಸುಗಳ ಆಧಾರದ ಮೇಲೆ, ರಾಜ್ಯದ ಮೊದಲ ಹಂತದಲ್ಲಿ ಜಾಗತಿಕ ಗುಣಮಟ್ಟದ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲಾಗುವ ಆದ್ಯತೆಯ ಪ್ರವಾಸಿ ತಾಣಗಳನ್ನು ಅಂತಿಮಗೊಳಿಸುವ ನಿರ್ಧಾರ ಕೈಗೊಳ್ಳಲಾಗುವ ಸಾಧ್ಯತೆ ಇದೆ.

ಈ ಯೋಜನೆಯ ಮೂಲಕ ಆಯ್ಕೆಯಾಗುವ ಪ್ರವಾಸಿ ತಾಣಗಳನ್ನು ವಿಶ್ವದರ್ಜೆಯ ಮೂಲಸೌಕರ್ಯ, ಪ್ರವಾಸಿಗರಿಗೆ ಉತ್ತಮ ಅನುಭವ, ಖಾಸಗಿ ಹೂಡಿಕೆ, ಸುಸ್ಥಿರ ಅಭಿವೃದ್ಧಿ ಹಾಗೂ ಅಂತರರಾಷ್ಟ್ರೀಯ ಮಟ್ಟದ ಬ್ರ್ಯಾಂಡಿಂಗ್ ಮೂಲಕ ಅಭಿವೃದ್ಧಿಪಡಿಸಿ, ಕರ್ನಾಟಕವನ್ನು ಭಾರತದ ಪ್ರಮುಖ ಜಾಗತಿಕ ಪ್ರವಾಸೋದ್ಯಮ ತಾಣವಾಗಿ ರೂಪಿಸುವ ಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ.

# ಅರ್ಹ ಮತದಾರರು ಬಿಟ್ಟುಹೋಗದಂತೆ ಕ್ರಮವಹಿಸಿ : ಆಮ್ಲಾನ್ ಆದಿತ್ಯ ಬಿಸ್ವಾಸ್

▪ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ



ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಬಿಟ್ಟು ಹೋಗದಂತೆ ಹಾಗೂ ಅನರ್ಹ ಮತದಾರರು ಸೇರ್ಪಡೆಯಾಗದಂತೆ ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಮತದಾರರ ಪಟ್ಟಿಗಳ ವೀಕ್ಷಕರು ಹಾಗೂ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತ ಆಮ್ಲಾನ್ ಆದಿತ್ಯ ಬಿಸ್ವಾಸ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-2026ರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮತದಾರರ ಗಣತಿ ನಮೂನೆಗಳನ್ನು ವಿತರಿಸಿರುವ ಕುರಿತು ಸಮಗ್ರವಾಗಿ ಪ್ರಗತಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಚುನಾವಣಾಧಿಕಾ ಹಾಗೂ ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಸ್. ಆಕಾಶ್ ಹಾಗೂ ಮುಖ್ಯ ಯೋಜನಾಧಿಕಾರಿ ಸಿ. ಎಸ್. ಗಾಯತ್ರಿ ಇದ್ದರು.

## ಉಚಿತ ಫ್ಯಾಷನ್ ಡಿಸೈನಿಂಗ್ ಮತ್ತು ಉದ್ಯಮಶೀಲತಾ ತರಬೇತಿ: ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ, ಬಳ್ಳಾರಿಯ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಸ್ವಯಂ ಉದ್ಯೋಗ ಪ್ರಾರಂಭಿಸಲು ಆಸಕ್ತಿ ಹೊಂದಿರುವ ಪರಿಶಿಷ್ಟ ಪಂಗಡದ ಮಹಿಳಾ ಫಲಾನುಭವಿಗಳು ಹಾಗೂ ಯುವನಿಧಿ ಯೋಜನೆಯ ಫಲಾನುಭವಿಗಳಿಗಾಗಿ 24 ದಿನಗಳ ಉಚಿತ 'ಫ್ಯಾಷನ್ ಡಿಸೈನಿಂಗ್' ವಲಯಾಧಾರಿತಉದ್ಯಮಶೀಲತಾಭಿವೃದ್ಧಿತರಬೇತಿಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಫ್ಯಾಷನ್ ಡಿಸೈನಿಂಗ್ ಕುರಿತು ಪ್ರಾಯೋಗಿಕ ಮತ್ತು ಸಿದ್ಧಾಂತ ತರಬೇತಿಯೊಂದಿಗೆ, ಉದ್ಯಮಶೀಲತೆಯ ಗುಣಲಕ್ಷಣಗಳು, ಸ್ವಯಂ ಉದ್ಯೋಗ ಆರಂಭಿಸುವ ಹಂತಗಳು, ಸರ್ಕಾರದ ಯೋಜನೆಗಳು, ಬ್ಯಾಂಕ್ ವ್ಯವಹಾರ, ಸಾಲ ಹಾಗೂ ಹಣಕಾಸು ಸೌಲಭ್ಯಗಳು, ಲೆಕ್ಕಪತ್ರ ನಿರ್ವಹಣೆ ಮತ್ತು ಯೋಜನಾ ವರದಿ ತಯಾರಿಕೆಯ ಬಗ್ಗೆ ಅನುಭವಿ ಉಪನ್ಯಾಸಕರಿಂದ ಮಾಹಿತಿ ನೀಡಲಾಗುವುದು.

ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಲ್ಲಿ ಅಭ್ಯರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ಮತ್ತು ಸಹಾಯವನ್ನು ಒದಗಿಸಲಾಗುವುದು.

**ಅರ್ಹತೆಗಳು:**

ವಯೋಮಿತಿಯು 18 ರಿಂದ 35 ವರ್ಷದೊಳಗಿನವರಾಗಿರಬೇಕು. ಕನಿಷ್ಠ ಎಸ್ಎಸ್ಎಲ್‌ಸಿ ತೇರ್ಗಡೆಯಾಗಿರಬೇಕು. ಪರಿಶಿಷ್ಟ ಪಂಗಡದ ಮಹಿಳೆಯರು ಹಾಗೂ ಯುವನಿಧಿಯೋಜನೆಯಆಸಕ್ತಫಲಾನುಭವಿಗಳುಅರ್ಹರಾಗಿರುತ್ತಾರೆ.

ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಜುಲೈ 15, 2026 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಹೊಸಪೇಟೆ ರಸ್ತೆ, ಬಳ್ಳಾರಿ – 583102. ಮೊ.9449226221/7483538942 ಗೆ ಸಂಪರ್ಕಿಸಬಹುದಾಗಿದೆ ಎಂದು ಸಿಡಾಕ್ ನ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ : ಪತ್ತೆಗೆ ಮನವಿ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ



ಸಂಡೂರು ತಾಲ್ಲೂಕಿನ ತೋರಣಗಲ್ಲು ನಲ್ಲಿ ವಾಸವಾಗಿದ್ದ ಮೊಳಕಾಲ್ಮೂರು ತಾಲ್ಲೂಕಿನ ಕಣಕುಪ್ಪೆ ಗ್ರಾಮದ ನಿವಾಸಿಯಾದ ಎರಿಸ್ವಾಮಿ ಎನ್ನುವ 58 ವರ್ಷದ ವ್ಯಕ್ತಿಯು ಜೂ.30 ರಂದು ಮನೆಯಿಂದ ಹೊರ ಹೋಗಿ ಕಾಣೆಯಾಗಿರುವ ಕುರಿತು ತೋರಣಗಲ್ಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

**ಚಹರೆ ಗುರುತು:**

ಅಂದಾಜು 5.5 ಅಡಿ ಎತ್ತರ, ಸಾಧಾರಣ ಮೈ ಕಟ್ಟು, ಕೆಂಪು ಮೈಬಣ್ಣ ಹಾಗೂ ದುಂಡು ಮುಖ ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಶರ್ಟ್ ಹಾಗೂ ನೀಲಿ ಬಣ್ಣದ ಚಕ್ಸ್ ಪಂಚೆ ಮತ್ತು ಹಸಿರು ಬಣ್ಣದ ಟವಲ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಭಾಷೆ ಮಾತನಾಡುತ್ತಾನೆ.

ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಬಳ್ಳಾರಿ ಎಸ್.ಪಿ ಅವರ ಕಚೇರಿ ದೂ.08392-258300, ತೋರಣಗಲ್ಲು ಡಿವೈಎಸ್‌ಪಿ ಮೊ.9480803010, ಸಂಡೂರು ವೃತ್ತ ಸಿ.ಪಿ.ಐ ದೂ.08395-260100, ಮೊ.9480803036, ತೋರಣಗಲ್ಲು ಪೊಲೀಸ್ ಠಾಣೆ ದೂ.08395-250100, ಮೊ.9480803062 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಟ್ರಾವೆಲ್ಲರ್ ನೂಕ್ ಕಾಮಗಾರಿ ಉದ್ಘಾಟನೆ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಇದೇ ಜುಲೈ 7 ರಂದು ಮಧ್ಯಾಹ್ನ 2.45 ಗಂಟೆಗೆ ಹಂಪಿಯ ಶ್ರೀ ಕೃಷ್ಣ ದೇವಾಲಯ ಪಾರ್ಕಿಂಗ್ ಪ್ರದೇಶ (ಉಗ್ರನರಸಿಂಹ ಸ್ಮಾರಕದ ಹತ್ತಿರ) ಕೇಂದ್ರ ಪುರಸ್ಕೃತ ಸ್ವದೇಶ್ ದರ್ಶನ್2.0 ಯೋಜನೆಯಡಿ ಟ್ರಾವೆಲ್ಲರ್ ನೂಕ್ ಕಾಮಗಾರಿ ಉದ್ಘಾಟನೆ ಕಾಮಗಾರಿ ಹಮ್ಮಿಕೊಳ್ಳಲಾಗಿದೆ.

ಇಂಧನ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಕೆ.ಜೆ.ಜಾರ್ಜ್ ಕಾರ್ಯಕ್ರಮ ಉದ್ಘಾಟಿಸಿ ಘನ ಉಪಸ್ಥಿತಿ ವಹಿಸುವರು. ಶಾಸಕ ಹೆಚ್.ಆರ್.ಗವಿಯಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬಳ್ಳಾರಿ ಸಂಸದ ಈ.ತುಕಾರಾಮ್, ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ, ಶಾಸಕರಾದ ಹಗರಿಬೊಮ್ಮನಹಳ್ಳಿ ಶಾಸಕ ನೇಮಿರಾಜ ನಾಯ್ಕ, ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್, ಹಡಗಲಿ ಶಾಸಕ ಎಲ್.ಕೃಷ್ಣನಾಯ್ಕ್, ಹರಪನಹಳ್ಳಿ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ್ ಬಿ.ಪಾಟೀಲ್, ಶಶಿಲ್ ಜಿ. ನಮೋಶಿ, ವೈ.ಎಂ. ಸತೀಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಕೆ.ಶಿವಮೂರ್ತಿ, ಪ್ರವಾಸೋದ್ಯಮ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕ್ ಚಂದ್ರ, ಪ್ರವಾಸೋದ್ಯಮ ಇಲಾಖೆ ಜಂಟಿ ಕಾರ್ಯದರ್ಶಿ ಸುವಾಸಿಶ್ ದಾಸ್, ಪ್ರವಾಸೋದ್ಯಮ ಇಲಾಖೆ ಆಯುಕ್ತ ಡಾ.ವಿ.ರಾಮ್ ಪ್ರಸಾತ್ ಮನೋಹರ್, ಜಿಲ್ಲಾ ಪ್ರವಾಸೋದ್ಯಮ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಕವಿತಾ ಎಸ್. ಮನ್ನಿಕೇರಿ, ಜಿಲ್ಲಾ ಪಂಚಾಯತ್ ಸಿಇಒ ನೋಂಗ್ಜಾಯ್ ಮೊಹಮದ್ ಅಲಿ ಅಕ್ರಂ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ ಭಾಗವಹಿಸುವರು ಎಂದು ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಪ್ರಭುಲಿಂಗ ಎಸ್. ತಳಕೇರಿ ತಿಳಿಸಿದ್ದಾರೆ.

## ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ವಿಜಯನಗರ

2026-27ನೇ ಸಾಲಿಗೆ ಅಲ್ಪ ಸಂಖ್ಯಾತ ಸಮುದಾಯಕ್ಕೆ ಸೇರಿದ ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮ, ಪದವಿ, ಸ್ನಾತಕೊತ್ತರ ಪದವಿ, ತಾಂತ್ರಿಕ ಮತ್ತು ವೃತ್ತಿಪರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಹಾಗೂ ಪಾರ್ಸಿ ಸಮುದಾಯದ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಾಗೂ (1 ರಿಂದ 8 ನೇ ತರಗತಿ) ಶಾಲೆಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಯೋಜನೆಯಡಿ ವಿದ್ಯಾರ್ಥಿ ವೇತನಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟಂಬರ್ 30 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸ ಬಯಸುವ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಕಳೆದ ಸೆಮಿಸ್ಟರ್ ಅಥವಾ ವಾರ್ಷಿಕ ಪರೀಕ್ಷೆಯಲ್ಲಿ ಶೇ.50ರಷ್ಟು ಅಂಕ ಪಡೆದಿರಬೇಕು. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿದ್ದು, ಪಿಯುಸಿ, ಡಿಪ್ಲೊಮಾ, ಇನ್ನಿತರೆ ಪದವಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪೋಷಕರ ಕುಟುಂಬದ ವಾರ್ಷಿಕ ಆದಾಯವು ರೂ.2 ಲಕ್ಷ ಹಾಗೂ 1 ರಿಂದ 8ನೇ ತರಗತಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಯಾ 1 ಲಕ್ಷ ಮೀರಿರಬಾರದು.

ವಿಶೇಷ ಸೂಚನೆ: ಶುಲ್ಕ ಮರುಪಾವತಿ ಯೋಜನೆ ಪ್ರಯೋಜನೆ ಪಡೆಯಲು ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮತ್ತು ಎನ್‌ಪಿಸಿಐ ಮ್ಯಾಪಿಂಗ್ ಆಕ್ಟಿವ್ ಆಗಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ http://dom.karnataka.gov.in ವೆಬ್ ಸೈಟ್ ಅಥವಾ8277799990, 9980237242, ಗೆ ಸಂಪರ್ಕಿಸಬಹುದು ಎಂದು ತಿಳಿಸಿದೆ.

# ಮಹಾ ವರುಣ ಯಾಗ ಯಶಸ್ವಿ : ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ ಎಂದು ವಿಶೇಷ ಪ್ರಾರ್ಥನೆ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ರಾಜ್ಯದಲ್ಲಿ ಹಾಗೂ ವಿಶೇಷವಾಗಿ ಬಳ್ಳಾರಿ ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಮಳೆಯ ಕೊರತೆಯಿಂದ ರೈತರು ಸಂಕಷ್ಟ ಎದುರಿಸುತ್ತಿರುವ ಹಿನ್ನೆಲೆಯಲ್ಲಿ, ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳಲಿ ಹಾಗೂ ರೈತರ ಬದುಕು ಸುಭಿಕ್ಷವಾಗಲಿ ಎಂಬ ಆಶಯದಿಂದ ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಬಿ. ನಾಗೇಂದ್ರ ಅವರ ನೇತೃತ್ವದಲ್ಲಿ ಸೋಮವಾರ ನಗರದ ಗ್ರಾಮದೇವತೆ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಮಹಾ ವರುಣ ಯಾಗ, ಹೋಮ-ಹವನ ಹಾಗೂ ವಿಶೇಷ ಪೂಜಾ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಬೆಳಿಗ್ಗೆ ಶುಭ ಮುಹೂರ್ತದಲ್ಲಿ ವೇದಪಂಡಿತರ ಸಾನ್ನಿಧ್ಯದಲ್ಲಿ ಆರಂಭವಾದ ಪೂಜಾ ಕಾರ್ಯಕ್ರಮದಲ್ಲಿ ವೇದಘೋಷ, ಮಂತ್ರೋಚ್ಚಾರಣೆ ಹಾಗೂ ಧಾರ್ಮಿಕ ವಿಧಿವಿಧಾನಗಳ ನಡುವೆ ಮಹಾ ವರುಣ ಯಾಗ ನಡೆಯಿತು. ಮಳೆ ದೇವರಾದ ವರುಣನಿಗೆ ವಿಶೇಷ ಪೂಜೆ ಸಲ್ಲಿಸಿ, ರಾಜ್ಯಾದ್ಯಂತ



ಸಮರ್ಪಕ ಮಳೆಯಾಗಿ ಜಲಾಶಯಗಳು ತುಂಬಲಿ, ಬೋರ್‌ವೆಲ್‌ಗಳು ಮತ್ತು ಕೆರೆ-ಕಟ್ಟೆಗಳು ನೀರಿನಿಂದ ಸಮೃದ್ಧವಾಗಲಿ, ಕೃಷಿ ಚಟುವಟಿಕೆಗಳು ಚೇತರಿಸಿಕೊಳ್ಳಲಿ ಹಾಗೂ ರೈತರ ಜೀವನದಲ್ಲಿ ಹೊಸ ಆಶಾಕಿರಣ ಮೂಡಲಿ ಎಂದು ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ರಾಜ್ಯದಲ್ಲಿ ಶಾಂತಿ, ನೆಮ್ಮದಿ ಮತ್ತು ಅಭಿವೃದ್ಧಿಯ ವಾತಾವರಣ ನೆಲೆಸಲಿ, ಜನಪರ ಯೋಜನೆಗಳು ಯಶಸ್ವಿಯಾಗಿ ಜಾರಿಯಾಗಲಿ ಹಾಗೂ ರಾಜ್ಯದ ಆಡಳಿತ ಯಾವುದೇ ಅಡ್ಡಿ-ಆತಂಕಗಳಿಲ್ಲದೆ ಸುಗಮವಾಗಿ ಸಾಗಲಿ ಎಂಬ ಆಶಯದೊಂದಿಗೆ ವಿಶೇಷ ಹೋಮ-ಹವನ ಹಾಗೂ ಪೂಜೆಗಳನ್ನು ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮುಖಂಡರು, ಕಾರ್ಯಕರ್ತರು ಮತ್ತು ಭಕ್ತರು ರಾಜ್ಯದ ಸಮಗ್ರ ಅಭಿವೃದ್ಧಿ, ರೈತರ ಕಲ್ಯಾಣ ಹಾಗೂ ಜನಸಾಮಾನ್ಯರ ಸುಖ-ಶಾಂತಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಪೂಜೆಯ ಬಳಿಕ ದೇವರಿಗೆ ವಿಶೇಷ ನೈವೇದ್ಯ ಸಮರ್ಪಿಸಿ ಭಕ್ತರಿಗೆ ತೀರ್ಥ-ಪ್ರಸಾದ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ವೆಂಕಟೇಶ್ ಪ್ರಸಾದ್, ಬಳ್ಳಾರಿ ಬುಡ ಅಧ್ಯಕ್ಷ ಜೆ.ಎಸ್. ಆಂಜನೇಯುಲು, ಅಲ್ಲಂ ಪ್ರಶಾಂತ್, ವೆಂಕಟೇಶ್ ಹೆಗಡೆ, ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಅನುಷ್ಠಾನದ ಅಧ್ಯಕ್ಷ ಚಿದಾನಂದಪ್ಪ, ಮಾಜಿ ಮಹಾಪೌರರಾದ ಮುಳ್ಳಂಗಿ ನಂದೀಶ್, ಬೊಯಪಾಟಿ ವಿಷ್ಣುವರ್ಧನ್, ನಾಗಳಕೆರೆ ಗೋವಿಂದ್, ಮುಧಿ ಮಲ್ಲಯ್ಯ, ಎಲ್. ಮಾರಣ್ಣ, ರೇಡಿಯೋ ಪಾರ್ಕ್ ನಾಗು, ಅಲ್ಲಾ ಬಕಾಶ್, ಹರ್ಷದ್, ಆಯಾಜ್ ಅಹ್ಮದ್, ಸೋಮು ಸೇರಿದಂತೆ ನೂರಾರು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ಸಾರ್ವಜನಿಕರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪೂಜೆಯಲ್ಲಿ ಪಾಲ್ಗೊಂಡರು

## ಎಂ.ಎಂ. ಶರಣಬಸವರಾಜ, ಕೆ. ಸಂತೋಷಕುಮಾರ್‌ಗೆ ಜಿಲ್ಲಾ ಮಟ್ಟದ ಉತ್ತಮ ದೈಹಿಕ ಶಿಕ್ಷಕ ಪ್ರಶಸ್ತಿ ಪುರಸ್ಕಾರ

■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಮತ್ತು ಶಿಕ್ಷಣ ಇಲಾಖೆಯ ಸಂಯೋಗದಲ್ಲಿ ಬಳ್ಳಾರಿ ನಗರದಲ್ಲಿ ಸೋಮವಾರ ನಡೆದ ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯಾಗಾರದಲ್ಲಿ ಅನುದಾನರಹಿತ ಶಾಲೆಗಳ ಪ್ರಾಥಮಿಕ ವಿಭಾಗದಲ್ಲಿ ಕಂಪ್ಲಿಯ ಪ್ರತಿಷ್ಠಿತ ವಿದ್ಯಾಸಾಗರ ಇಂಟರ್‌ನ್ಯಾಷನಲ್ ಶಾಲೆಯ ಮುಖ್ಯಗುರು ಎಂ.ಎಂ.ಶರಣಬಸವರಾಜ ಮತ್ತು ಪ್ರೌಢಶಾಲಾ ವಿಭಾಗದಲ್ಲಿ ಕಂಪ್ಲಿ ಕ್ವೀನ್ ಮೇರಿ ಶಾಲೆಯ ದೈಹಿಕ ಶಿಕ್ಷಕ ಕೆ.ಸಂತೋಷಕುಮಾರ್ ಇವರಿಗೆ 2025-26ನೇ ಸಾಲಿನ ಬಳ್ಳಾರಿ ಜಿಲ್ಲಾ ಮಟ್ಟದ ಉತ್ತಮ ದೈಹಿಕ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ನಂತರ ಪ್ರಶಸ್ತಿ ಪುರಸ್ಕೃತ ಎಂ.ಎಂ.ಬಸವರಾಜ, ಕೆ.ಸಂತೋಷ್ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ಪರಿಗಣಿಸಿ, ಈ ಪ್ರಶಸ್ತಿ ನೀಡಿದ್ದು, ಇನ್ನಷ್ಟು ಸೇವೆಗೆ ಉತ್ಸಾಹ ಹೆಚ್ಚಿಸಿದೆ. ಶಿಕ್ಷಣ



ಎಂಬುವುದು ಹುಲಿಯ ಹಾಲಿದ್ದಂತೆ, ಅದನ್ನು ಕುಡಿದವರು ಘರ್ಜಿಸಲೇಬೇಕು ಎನ್ನುವ ಹಾಗೇ ಶಿಕ್ಷಣ ಪಡೆದ ಪ್ರತಿಯೊಂದು ಘರ್ಜಿಸುವ ಜೊತೆಗೆ ಜೀವನ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡಿಸಲು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಕುರುಗೋಡು ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕಿ ಪದ್ಮ ರೆಡ್ಡಿ ಮತ್ತು ಜಿಲ್ಲಾ, ತಾಲೂಕು ಅಧ್ಯಕ್ಷರು ಹಾಗೂ ವಿವಿಧ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

## ಜುಲೈ 21 ರಂದು ಉಚಿತ "ವೆಂಡರ್ ಡೆವೆಲೋಪ್‌ಮೆಂಟ್ ಕಾರ್ಯಾಗಾರ"

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಕೇಂದ್ರ ಸರ್ಕಾರದ ನ್ಯಾಷನಲ್ ಎಸ್‌ಸಿ/ಎಸ್‌ಟಿ ಹಬ್, ಆರ್‌ಸೆಸ್ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಜಿಲ್ಲಾ ಎಸ್‌ಸಿ/ಎಸ್‌ಟಿ ಕೈಗಾರಿಕಾ ಉದ್ಯಮಿಗಳ ಸಂಘದ ಜಂಟಿ ಆಶ್ರಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ಉದ್ಯಮಿಗಳಿಗಾಗಿ ವಿಶೇಷ ಉಚಿತ 'ವೆಂಡರ್ ಡೆವಲಪ್‌ಮೆಂಟ್ ಕಾರ್ಯಾಗಾರ'ವನ್ನು ಇದೇ ಜುಲೈ 21ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ಮದಕರಿ ವೃತ್ತದ ಬಳಿಯ ಐಎಂಎ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಹೊಸ ಉದ್ಯಮ ಆರಂಭಿಸಲು ಆಸಕ್ತಿ ಹೊಂದಿರುವ ಯುವಕರು, ಮಹಿಳೆಯರು ಮತ್ತು ಹಾಲಿ ಉದ್ಯಮಿಗಳಲ್ಲಿ ಜಾಗೃತಿ ಮೂಡಿಸುವುದು ಈ ಕಾರ್ಯಾಗಾರದ ಪ್ರಮುಖ ಉದ್ದೇಶವಾಗಿದ್ದು, ಕಾರ್ಯಕ್ರಮದಲ್ಲಿ ತಜ್ಞರಿಂದ ಉದ್ಯಮ ಪ್ರಾರಂಭಿಸುವ ಸುಲಭ ವಿಧಾನಗಳು, ಸರ್ಕಾರದ ವಿವಿಧ ಯೋಜನೆಗಳ ವಿವರಣೆ, ಸರ್ಕಾರಿ ಖರೀದಿ ಪ್ರಕ್ರಿಯೆಗಳಲ್ಲಿ ಭಾಗವಹಿಸುವ ಅವಕಾಶಗಳು ಹಾಗೂ ಉದ್ಯಮಕ್ಕೆ ಸಿಗುವ ಹಣಕಾಸಿನ ನೆರವು ಮತ್ತು ಮಾರುಕಟ್ಟೆ ಸಂಪರ್ಕಗಳ ಕುರಿತು ಸಂಪೂರ್ಣ ಮಾಹಿತಿ ನೀಡಲಾಗುವುದು.

ಈ ಕಾರ್ಯಾಗಾರದಲ್ಲಿ ಭಾಗವಹಿಸಲು ಯಾವುದೇ ರೀತಿಯ ಶುಲ್ಕ ಇರುವುದಿಲ್ಲ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಆಸಕ್ತ ಯುವಕರು, ಮಹಿಳಾ ಫಲಾನುಭವಿಗಳು, ಉದ್ಯಮಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಮತದಾರರ ಪಟ್ಟಿ ಪರಿಷ್ಕರಣೆ : ಪ್ರತಿಯೊಬ್ಬರ ಮನೆಬಾಗಿಲಿಗೆ ತಲುಪಲಿವೆ ಫಾರಂಗಳು : ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ : ಗಂಗಾಧರಸ್ವಾಮಿ

■ ಗಣಿನಾಡವಾಣಿ ವಾರ್ತೆ, ದಾವಣಗೆರೆ

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕವಾಗಿ ಮತ್ತು ವ್ಯವಸ್ಥಿತವಾಗಿ ನಡೆಸಲಾಗುತ್ತಿದ್ದು, ಸಾರ್ವಜನಿಕರು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರು ತಿಳಿಸಿದರು.

ಅವರು ಸೋಮವಾರ, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಜಿಲ್ಲೆಯಲ್ಲಿ ಎಲ್ಲೂ ಕೂಡ ಸಾಮೂಹಿಕವಾಗಿ ಫಾರಂ ವಿತರಣೆ ಮಾಡುತ್ತಿಲ್ಲ ಮತ್ತು ಮಾಡುವುದೂ ಇಲ್ಲ, ಕೆಲವು ಬೂತ್‌ಗಳಲ್ಲಿ ಸಾರ್ವಜನಿಕರೇ ಗುಂಪುಗೂಡಿ ಇಲ್ಲೇ ಫಾರಂ ನೀಡಿ ಎಂದು ಕೇಳಿರುವ ಉದಾಹರಣೆಗಳು ಇವೆಯೇ ಹೊರತು, ಇಲಾಖೆಯಿಂದ ಸಾಮೂಹಿಕ ವಿತರಣೆ ನಡೆದಿಲ್ಲ ಎಂದರು.

ಪ್ರತಿಯೊಬ್ಬ ಬೂತ್ ಮಟ್ಟದ ಅಧಿಕಾರಿಗಳಿಗೆ ಈಗಾಗಲೇ ಲಿಖಿತ ಸೂಚನೆ ಹಾಗೂ ಸೂಕ್ತ ತರಬೇತಿಯನ್ನು ನೀಡಲಾಗಿದೆ. ಅವರು ಕಡ್ಡಾಯವಾಗಿ ಪ್ರತಿಯೊಬ್ಬರ ಮನೆ ಮನೆಗೆ ಭೇಟಿ ನೀಡಿ ಫಾರಂಗಳನ್ನು ವಿತರಿಸುವರು. ಭೇಟಿ ನೀಡಿದ ನಂತರ ಮನೆಯ ಬಾಗಿಲಿನ ಮೇಲೆ ಕಡ್ಡಾಯವಾಗಿ ಸ್ಟಿಕ್ಕರ್ ಅಂಟಿಸಬೇಕೆಂದು ಆದೇಶಿಸಲಾಗಿದೆ. ಹಳ್ಳಿಗಳಲ್ಲಿ ಹಾಗೂ ಕೆಲವು ಕಡೆ ಸಾರ್ವಜನಿಕರು ತಮ್ಮ ಫಾರಂಗಳನ್ನು ಬೇಗ ಮಾಡಿಕೊಡಿ ಎಂದು ಬಿ.ಎಲ್.ಓಗಳ ಬಳಿ ಗುಂಪುಗೂಡುತ್ತಿರುವುದು ಕಂಡುಬಂದಿದೆ. ಆದರೆ, ಇನ್ನು ಮುಂದೆ ಹೀಗಾಗದಂತೆ ಎಚ್ಚರಿಕೆ ವಹಿಸಲು ನಮ್ಮ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಸಂಪೂರ್ಣ ತಂಡವು ಬಿ.ಎಲ್.ಓ.ಗಳಿಗೆ ನೆರವಾಗಲಿದ್ದಾರೆ ಎಂದು ತಿಳಿಸಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 40 ಸಹಾಯ ಕೇಂದ್ರಗಳನ್ನು ತೆರೆಯಲಾಗಿದೆ. ಸಾರ್ವಜನಿಕರು ನೇರವಾಗಿ ಈ ಸಹಾಯ ಕೇಂದ್ರಗಳಿಗೆ ಭೇಟಿ ನೀಡಿ ತಮ್ಮ ಫಾರಂಗಳನ್ನು ಭರ್ತಿ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಫಾರಂಗಳನ್ನು ಕಡ್ಡಾಯವಾಗಿ ಬಿ.ಎಲ್.ಓ.ಗಳಿಗೆ ಹಸ್ತಾಂತರಿಸಬೇಕು ಎಂದರು

ರಾಷ್ಟ್ರೀಯ ಪಕ್ಷಗಳಿಂದ ನೇಮಕಗೊಂಡಿರುವ ಬಿ.ಎಲ್.ಎ (ಬೂತ್ ಮಟ್ಟದ ಏಜೆಂಟ್‌ಗಳು) ಸಾರ್ವಜನಿಕರಿಗೆ ಫಾರಂ ಭರ್ತಿ ಮಾಡಲು ಸಹಾಯ ಮಾಡಬಹುದು. ಅವರು ಮೊದಲ ಹಂತದಲ್ಲಿ ತಲಾ 50 ಫಾರಂಗಳನ್ನು ಸಂಗ್ರಹಿಸಿ,



ಭರ್ತಿ ಮಾಡಿ ನಮ್ಮ ಬಿ.ಎಲ್.ಓ.ಗಳಿಗೆ ತಂದುಕೊಡಲು ಅವಕಾಶ ಕಲ್ಪಿಸಲಾಗಿದೆ. ಇದು ಗುಂಪಾಗಿ ಮಾಡುವುದಲ್ಲ, ಬದಲಿಗೆ ಮನೆ ಮನೆಗೆ ಹೋಗಿ ಬಿ.ಎಲ್.ಓಗಳ ಸಹಯೋಗದೊಂದಿಗೆ ಮಾಡುವ ಕಾರ್ಯವಾಗಿದೆ ಎಂದರು.

ಸಹಿ ಮಾಡುವ ಪ್ರಕ್ರಿಯೆಯು ಮತದಾರರದ್ದೇ ಆಗಿರುತ್ತದೆ. ಮೊಬೈಲ್ ಬಳಸಲು ಬಾರದ ಅನಕ್ಷರಸ್ಥರಿಗೆ ಅಥವಾ ತಾಂತ್ರಿಕ ತೊಂದರೆ ಇರುವವರಿಗೆ ಬಿ.ಎಲ್.ಓ ಹಾಗೂ ಬಿ.ಎಲ್.ಎ.ಗಳು ಸಹಾಯ ಮಾಡಲಿದ್ದಾರೆ. ಭಾರತೀಯ ಚುನಾವಣಾ ಆಯೋಗದ ನಿರ್ದೇಶನದ ಅಡಿಯಲ್ಲೇ ನಮ್ಮ ಇಡೀ ತಂಡ ಕೆಲಸ ಮಾಡುತ್ತಿದೆ ಎಂದರು.

ಒಂದೇ ಕ್ಷೇತ್ರದ ವ್ಯಾಪ್ತಿಯಲ್ಲಿ ಮನೆ ಶಿಫ್ಟ್ ಮಾಡಿಕೊಂಡಿರುವ ಮತದಾರರು, ತಮ್ಮ ಹೆಸರು ಕೈಬಿಟ್ಟು ಹೋಗುವ ಆತಂಕ ಪಡಬೇಕಾಗಿಲ್ಲ. ಅಂತಹ ಮತದಾರರು 'ಫಾರಂ-8' ಅನ್ನು ಸಲ್ಲಿಸುವ ಮೂಲಕ ತಮ್ಮ ವಿಳಾಸವನ್ನು ಸುಲಭವಾಗಿ ಬದಲಾಯಿಸಿಕೊಳ್ಳಬಹುದು ಎಂದರು.

ಈಗಾಗಲೇ ಮ್ಯಾಪಿಂಗ್ ಆಗಿರುವ ಮತದಾರರು ಯಾವುದೇ ದಾಖಲೆಗಳನ್ನು ನೀಡುವ ಅಗತ್ಯವಿರುವುದಿಲ್ಲ.

ಒಂದು ವೇಳೆ ತಪ್ಪಾಗಿ ಮ್ಯಾಪಿಂಗ್ ಆಗಿದ್ದರೆ ಅಥವಾ ತಂದೆ-ತಾಯಿಯ ಹೆಸರುಗಳಲ್ಲಿ ತಪ್ಪುಗಳಾಗಿದ್ದರೆ, 2002ರ ಹಳೆಯ ವೋಟರ್ ಐಡಿ ವಿವರಗಳ ಆಧಾರದ ಮೇಲೆ ಬಿ.ಎಲ್.ಓ ಮೊಬೈಲ್ ಆಪ್ (BLO Mobile App) ಮೂಲಕ ತಿದ್ದುಪಡಿ ಹಾಗೂವರ್ಗಾವಣೆಗೆಅವಕಾಶಮಾಡಿಕೊಡಲಾಗಿದೆ ಎಂದು ತಿಳಿಸಿದರು.

18 ವರ್ಷ ತುಂಬಿರುವ ಅರ್ಹ ಯುವ ಮತದಾರರು ಹೊಸದಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸಲು ನಿಗದಿಪಡಿಸಿದ ಫಾರಂಗಳನ್ನು ಪಡೆದು ಭರ್ತಿ ಮಾಡಬಹುದಾಗಿದೆ. ಇದಕ್ಕಾಗಿ ಸಾರ್ವಜನಿಕರು ಯಾರೂ ಮತಗಟ್ಟೆಗಳನ್ನಾಗಲಿ ಅಥವಾ ಬಿ.ಎಲ್.ಓಗಳನ್ನಾಗಲಿ ಹುಡುಕಿಕೊಂಡು ಹೋಗುವ ಅಗತ್ಯವಿಲ್ಲ, ನಾವೇ ನಿಮ್ಮ ಮನೆ ಬಾಗಿಲಿಗೆ ಬರುತ್ತೇವೆ ಎಂದು ತಿಳಿಸಿದರು.

ಅನಾಥಾಶ್ರಮಗಳಲ್ಲಿರುವ ಹಾಗೂ ತಂದೆ-ತಾಯಿಯರ ಮಾಹಿತಿ ಇಲ್ಲದವರಿಗೂ ಸಹ ಮತದಾನದ ಹಕ್ಕನ್ನು ಕಲ್ಪಿಸಲು ಚುನಾವಣಾ ಆಯೋಗವು ವಿಶೇಷ ಕ್ರಮ ಕೈಗೊಂಡಿದೆ. ಸರ್ಕಾರಿ ಅನಾಥಾಶ್ರಮವೊಂದರಲ್ಲಿರುವ 43 ಯುವಕರು 2025ನೇ ಇಸವಿಯಲ್ಲೂ ಮತದಾರರ ಪಟ್ಟಿಯಲ್ಲಿದ್ದಾರೆ. ಇಂತಹ ಸಂದರ್ಭಗಳಲ್ಲಿ ಸರ್ಕಾರವೇ ಅವರಿಗೆ ಪೋಷಕರಾಗಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರೆ ಅವರ ಅಧಿಕೃತ ಪೋಷಕರಾಗಿರುತ್ತಾರೆ ಎಂದರು.

ದೇವದಾಸಿಯರಂತಹ ಪ್ರಕರಣಗಳಲ್ಲಿ ತಂದೆಯ ವಿವರಗಳು ಲಭ್ಯವಿಲ್ಲದಿದ್ದರೆ, ತಾಯಿಯ ವಿವರಗಳನ್ನು ನೀಡಿ ಹೆಸರು ನಮೂದಿಸಲು ಅವಕಾಶವಿದೆ. ಇನ್ನು ಕೆಲವು ಸಂದರ್ಭಗಳಲ್ಲಿ ತಂದೆ-ತಾಯಿ ಇಬ್ಬರೂ ಇಲ್ಲದಿದ್ದರೆ, ಅಂತವರು ತಮ್ಮ ಅಜ್ಜ ಅಥವಾ ಅಜ್ಜಿಯ ಹೆಸರನ್ನು ಸಂಬಂಧದ ಕಾಲಂನಲ್ಲಿ ನಮೂದಿಸಿ ಗುರುತಿಸಿಕೊಳ್ಳಲು ಅವಕಾಶ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ಚುನಾವಣಾ ಆಯೋಗವು ಇಂತಹ ಎಲ್ಲಾ ಸವಾಲುಗಳಿಗೂ ಕಾನೂನಾತ್ಮಕವಾಗಿ ಹಾಗೂ ಜಖಿಟಿಜಣ ಮೊಬೈಲ್ ಆಪ್ ಮತ್ತು https://voters.eci.gov.in ಮೂಲಕ ಸೂಕ್ತ ಪರಿಹಾರವನ್ನು ಕಲ್ಪಿಸಿದೆ. ಹೀಗಾಗಿ ಯಾವುದೇ ಮತದಾರರು ಆತಂಕ ಪಡುವ ಅಗತ್ಯವಿಲ್ಲ. ಬಿ.ಎ.ಲ್.ಓ ಗಳು ಮನೆಗೆ ಬಂದಾಗ ಅಥವಾ ದೂರವಾಣಿ ಮೂಲಕ ಸಂಪರ್ಕಿಸಿದಾಗ ಸಾರ್ವಜನಿಕರು ಸ್ಪಂದಿಸಿ, ಮಾಹಿತಿ ನೀಡಬೇಕು ಎಂದು ತಿಳಿಸಿದರು.

**ಫಾರಂ ಹಂಚಿಕೆಯಲ್ಲಿ ರಾಜ್ಯದಲ್ಲೇ ದಾವಣಗೆರೆ ಜಿಲ್ಲೆಗೆ 2ನೇ ಸ್ಥಾನ;**

ಮಾಯಾಕೊಂಡ ಕ್ಷೇತ್ರಕ್ಕೆ ಪ್ರಥಮ ಸ್ಥಾನ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ಪ್ರಗತಿಯಲ್ಲಿದ್ದು, ಜಿಲ್ಲಾದ್ಯಂತ ಒಟ್ಟಾರೆ ಶೇ. 94 ರಷ್ಟು ಎನ್ಯುಮರೇಷನ್ ಫಾರ್ಮ್‌ಗಳನ್ನು (Enumeration Forms) ಫಾರಂಗಳನ್ನು ಹಂಚಿಕೆ ಮಾಡುವ ಮೂಲಕ ದಾವಣಗೆರೆ ಜಿಲ್ಲೆಯು ರಾಜ್ಯದಲ್ಲಿಯೇ 2ನೇ ಸ್ಥಾನ ಪಡೆದು ಅಭೂತಪೂರ್ವ ಸಾಧನೆ ಮಾಡಿದೆ.

ಇದೇ ವೇಳೆ ಜಿಲ್ಲೆಯ ಮಾಯಕೊಂಡ ವಿಧಾನಸಭಾ ಕ್ಷೇತ್ರದಲ್ಲಿ ಶೇ. 99.81 ರಷ್ಟು ದಾಖಲೆ ಪ್ರಮಾಣದ ಎನ್ಯುಮರೇಷನ್ ಫಾರ್ಮ್‌ಗಳನ್ನು (Enumeration Forms) ಪಾರಂಗಳನ್ನು ಅತ್ಯಂತ ಯಶಸ್ವಿಯಾಗಿ ಹಂಚಿಕೆ ಮಾಡಲಾಗಿದ್ದು, ಇಡೀ ರಾಜ್ಯದಲ್ಲಿಯೇ ಪ್ರಥಮ ಸ್ಥಾನವನ್ನು ಮುಡಿಗೇರಿಸಿಕೊಂಡಿದೆ. ಹಾಗೂ ಶೇ. 10.8 ರಷ್ಟು ಗಣಕೀಕರಣವಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮನೆ ಮನೆ ಭೇಟಿ ಹಾಗೂ ಮಾಹಿತಿ ಸಂಗ್ರಹ ಪ್ರಗತಿಯಲ್ಲಿದಾವಣಗೆರೆ ಜಿಲ್ಲೆಯಲ್ಲಿ ಜೂನ್ 16 ರ ವೇಳೆಗೆ ಒಟ್ಟು 14,99,282 ಮತದಾರರಿದ್ದು, ಇವರಿಗೆ ಸಂಬಂಧಿಸಿದ ಎನ್ಯುಮರೇಷನ್ ಫಾರ್ಮ್‌ಗಳನ್ನು (Enumeration Forms) ಮುದ್ರಿಸಿ ಬಿಎಲ್‌ಓಗಳಿಗೆ ವಿತರಿಸಲಾಗಿದೆ. ಜಿಲ್ಲಾದ್ಯಂತ ಜೂನ್ 06 ರಿಂದ ಜುಲೈ 29 ರ ಅವಧಿಯಲ್ಲಿ ಬಿಎಲ್‌ಓಗಳು ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದು, ಇದೇ ಅವಧಿಯಲ್ಲಿ ಸಂಗ್ರಹಿಸಿದ ನಮೂನೆಗಳ ಗಣಕೀಕರಣ ಕಾರ್ಯವೂ ಪ್ರಗತಿಯಲ್ಲಿದೆ.

ಪತ್ರಿಕಾ ಗೋಷ್ಠಿಗೂ ಮುನ್ನ ವಿವಿಧ ರಾಷ್ಟ್ರೀಯ ಪಕ್ಷಗಳೊಂದಿಗೆ ಸಭೆ ನಡೆಸಿದ್ದು, ರಾಷ್ಟ್ರೀಯ ಪಕ್ಷಗಳು ಮತದಾರರ ಪಟ್ಟಿ ಪರಿಷ್ಕರಣೆಗೆ ಬಿ.ಎಲ್.ಎಗಳನ್ನುನೇಮಕಮಾಡಿದ್ದುಎನ್ಯುಮರೇಷನ್ ಫಾರ್ಮ್‌ಗಳನ್ನು (Enumeration Forms) ಪಾರಂಗಳನ್ನು ನಮೂದಿಸಿ ಬಿ.ಎಲ್.ಓ ಗಳಿಗೆ ನೀಡಲು ಮತ್ತು ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಕಾರ್ಯದಲ್ಲಿ ರಾಷ್ಟ್ರೀಯ ಪಕ್ಷಗಳು ಸಹಕಾರ ನೀಡುವುದಾಗಿ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್, ಉಪ ಕಾರ್ಯದರ್ಶಿ ಮಮತ ಹಸ ಗೌಡರ್, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಪಾಲಿಕೆ ಆಯುಕ್ತ ಮಹಾಂತೇಶ್ ಉಪಸ್ಥಿತರಿದ್ದರು.

# ಗಣತಿ ನಮೂನೆ ವಿತರಣೆ : ಚಿತ್ರದುರ್ಗ ರಾಜ್ಯಕ್ಕೆ ಪ್ರಥಮ

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ



ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)–2026 ರ ಅಂಗವಾಗಿ ಹಮ್ಮಿಕೊಳ್ಳಲಾಗಿರುವ ಮನೆ–ಮನೆ ಭೇಟಿ ಕಾರ್ಯಕ್ರಮವು ಯಶಸ್ವಿಯಾಗಿ ಸಾಗುತ್ತಿದ್ದು, ಇದುವರೆಗೆ ಜಿಲ್ಲೆಯಾದ್ಯಂತ ಒಟ್ಟು 13,96,020 (ಶೇ.96.91) ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಈ ಮೂಲಕ ರಾಜ್ಯದಲ್ಲಿಯೇ ಚಿತ್ರದುರ್ಗ ಮೊದಲ ಸ್ಥಾನದಲ್ಲಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕಳೆದ ಜೂನ್ 30 ರಿಂದ ಪ್ರಾರಂಭವಾಗಿರುವ ಈ ಮನೆ–ಮನೆ ಭೇಟಿ ಕಾರ್ಯವು ಜುಲೈ 29ರವರೆಗೆ ನಡೆಯಲಿದ್ದು, ಜಿಲ್ಲೆಯ ಎಲ್ಲಾ ಮತಗಟ್ಟೆ ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಮನೆಗಳಿಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸುತ್ತಿದ್ದಾರೆ.

2026ರ ಜೂನ್ 16 ರ ಅಂಕಿ–ಅಂಶಗಳ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 14,40,534 ಮತದಾರರಿದ್ದು, ಒಟ್ಟು 1,661 ಭಾಗಗಳಲ್ಲಿ ಈ ಪ್ರಕ್ರಿಯೆ ಜರಗುತ್ತಿದೆ. ಜುಲೈ 6ರ ಅಂತ್ಯಕ್ಕೆ ಲಭ್ಯವಾಗಿರುವ ಮಾಹಿತಿ ಪ್ರಕಾರ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳ ಪ್ರಗತಿ ವಿವರ ಇಂತಿದೆ.

ಮೊಳಕಾಲ್ಮೂರು ಕ್ಷೇತ್ರದಲ್ಲಿ 2,51,685 ಮತದಾರರಿದ್ದು, 2,45,251 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಈ ಪೈಕಿ 51,661 ನಮೂನೆಗಳನ್ನು ಗಣಕೀಕರಣಗೊಳಿಸಲಾಗಿದ್ದು, 86 ಮರಣ, 107 ಶಾಶ್ವತ ವಲಸೆ, 18 ಡಬಲ್ ಎಂಟ್ರಿ ಹಾಗೂ ನಾಲ್ವರು ಗೈರುಹಾಜರಿ ಪ್ರಕರಣಗಳು ಪತ್ತೆಯಾಗಿವೆ.

ಚಳ್ಳಕೆರೆ ಕ್ಷೇತ್ರದಲ್ಲಿ ಒಟ್ಟು 2,25,619 ಮತದಾರರ ಪೈಕಿ 2,23,234 ನಮೂನೆಗಳನ್ನು ವಿತರಿಸಲಾಗಿದ್ದು, 34,014 ನಮೂನೆಗಳು ಗಣಕೀಕೃತಗೊಂಡಿವೆ ಹಾಗೂ 106 ಮರಣ, 86 ವಲಸೆ, 40 ಡಬಲ್ ಎಂಟ್ರಿ, 3 ಗೈರು ಹಾಜರಿ ಪ್ರಕರಣಗಳು ಕಂಡುಬಂದಿವೆ. ಚಿತ್ರದುರ್ಗ ಕ್ಷೇತ್ರದಲ್ಲಿ 2,69,332 ಮತದಾರರಿದ್ದು, 2,63,446 ನಮೂನೆಗಳನ್ನು ವಿತರಿಸಲಾಗಿದೆ. 33,058 ನಮೂನೆಗಳ ಗಣಕೀಕರಣ ಮುಗಿದಿದ್ದು, 101 ಮರಣ ಹಾಗೂ 71 ವಲಸೆ, 23 ಡಬಲ್ ಎಂಟ್ರಿ, 3 ಗೈರು ಹಾಜರಿ ಪ್ರಕರಣಗಳು ದಾಖಲಾಗಿವೆ. ಹಿರಿಯೂರು ಕ್ಷೇತ್ರದಲ್ಲಿ 2,51,482 ಮತದಾರರ ಪೈಕಿ 2,46,125 ನಮೂನೆಗಳನ್ನು ವಿತರಿಸಲಾಗಿದ್ದು, 40,264 ನಮೂನೆಗಳನ್ನು ಆನ್‌ಲೈನ್ ಸೇರಿಸಲಾಗಿದೆ.

ಇಲ್ಲಿ 190 ಮರಣ ಪ್ರಕರಣಗಳು, 119 ಶಾಶ್ವತ ವಲಸೆ, 58 ಡಬಲ್ ಎಂಟ್ರಿ, 6 ಗೈರು ಹಾಜರಿ ಪತ್ತೆಯಾಗಿವೆ. ಹೊಸದುರ್ಗ ಕ್ಷೇತ್ರದಲ್ಲಿ 2,03,481 ಮತದಾರರ ಪೈಕಿ 1,92,552 ನಮೂನೆಗಳನ್ನು ವಿತರಿಸಲಾಗಿದ್ದು, 29,401 ನಮೂನೆಗಳು ಗಣಕೀಕರಣಗೊಂಡಿವೆ ಮತ್ತು 202 ಮರಣ ಹಾಗೂ 95 ವಲಸೆ, 44 ಡಬಲ್ ಎಂಟ್ರಿ, 4 ಗೈರು ಹಾಜರಿ ಪ್ರಕರಣಗಳು ವರದಿಯಾಗಿವೆ.

ಹೊಳಲ್ಕೆರೆ ಕ್ಷೇತ್ರದಲ್ಲಿ 2,38,935 ಮತದಾರರ ಪೈಕಿ 2,25,412 ನಮೂನೆಗಳನ್ನು ವಿತರಿಸಲಾಗಿದ್ದು, 34,913 ನಮೂನೆಗಳನ್ನು ಗಣಕೀಕರಣ ಮಾಡಲಾಗಿದ್ದು, 202 ಮರಣ, 135 ಶಾಶ್ವತ, 15 ಡಬಲ್ ಎಂಟ್ರಿ, 2 ಗೈರು ಹಾಜರಿ ಪ್ರಕರಣ ವರದಿಯಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

# ರೈತರ ಜೋಳದ ಖರೀದಿ ಬಾಕಿ ಹಣ ಬಿಡುಗಡೆಗೆ ಆಗ್ರಹ



■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ರಾಜ್ಯದಲ್ಲಿ ರೈತರಿಂದ ಖರೀದಿಸಿದ ಮುಂಗಾರು, ಹಿಂಗಾರು ಜೋಳದ ಬಾಕಿ ಹಣವನ್ನು ಬಿಡುಗಡೆ ಮಾಡಬೇಕೆಂದು ಆಗ್ರಹಿಸಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ ಅವರ ನಿರ್ದೇಶನದ ಮೇರೆಗೆ ರಾಜ್ಯ ಕಾರ್ಯಾಧ್ಯಕ್ಷ ಬಿ.ವಿ.ಗೌಡ ನೇತೃತ್ವದಲ್ಲಿ ರೈತರು ಬೆಂಗಳೂರಿನಲ್ಲಿ ಆಹಾರ ಮತ್ತು ನಾಗರೀಕ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಗದೀಶ ಎಂ.ಕೆ ಇವರಿಗೆ ಸೋಮವಾರ ಮನವಿ ಪತ್ರ ಸಲ್ಲಿಸಿದರು.

ನಂತರ ಬಿ.ವಿ.ಗೌಡ ಮಾತನಾಡಿ, ರಾಜ್ಯದಲ್ಲಿ ಮುಂಗಾರು ಹಿಂಗಾರು ಮತ್ತು ಜೋಳವನ್ನು ರೈತರಿಂದ ಖರೀದಿ ಮಾಡಿ 4 ತಿಂಗಳು ಕಳೆದರು, ಕೆಲ ರೈತರಿಗೆ ಮುಂಗಾರು ಜೋಳದ ಹಣ ಪಾವತಿ ಆಗಿದು ಬಿಟ್ಟರೆ, ಶೇ.75% ರೈತರಿಗೆ ಇನ್ನು ಹಣ ಪಾವತಿ ಆಗಿರುವುದಿಲ್ಲ, ರೈತ ಜೋಳ ಬೆಳೆದು ಜನವರಿಯಲ್ಲಿ ಕಟ್ಟವು ಮಾಡಿ ಅನೇಕ ಬಾರಿ ಹೊರಟ ಮಾಡಿದ ನಂತರ ಜೋಳ ಖರೀದಿ ಮಾಡಿ ಇಲ್ಲಿಯ ವರೆಗು ಕೂಡ ಹಣ ಪಾವತಿಯಾಗಿಲ್ಲ ರೈತ ಬರುವ ಹಣವೆಲ್ಲ ಬಡ್ಡಿ ಕಟುವಂತಾಗಿ ಸಾಲದ ಸೂಳಿಗೆ ಸಿಲುಕಿಸುತ್ತಿರವುದು ಎಷ್ಟು ಸರಿ ಕಳೆದ ವರ್ಷ ಅತಿ ಹೆಚ್ಚು ಮಳೆಯಿಂದಾಗಿ ನಷ್ಟ ಅನುಭವಿಸಿದ್ದು ಕಣ್ಣ ಮುಂದೆ ಇರುವಾಗ ಸಾಲ ಸುಲ ಮಾಡಿ ಮುಂಗಾರು ಬಿತ್ತನೆ ಮಾಡಿದ ಬೆಳಯಲ್ಲ ಮಳೆಯಿಲ್ಲದೆ ಒಣಗಿ ಹೋಗಿ ನಷ್ಟ ಅನುಭವಿಸಿದ್ದು ಕಾಣುತ್ತದೆ, ಇಂತಾ ಪರಸ್ಥಿತಿಯಲ್ಲಿ ಸರ್ಕಾರ ಖರೀದಿ ಮಾಡಿದ ಜೋಳದ ಹಣವನ್ನು ಕೂಡಲೆ ರೈತರ ಖಾತೆಗೆ ಜಮಾ ಮಾಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಬಸವರಾಜ ಗೋಡಿಹಾಳ್, ಮಲ್ಲಣಗೌಡ ಪಾಟೀಲ್ ಇದ್ದರು.

## ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಜಸ್ಟಿಸ್ ವಿಭು ಬಖ್ರು ಜಿಲ್ಲಾ ಪ್ರವಾಸ

■ ಗಣಿನಾಡವಾಣಿ ವಾರ್ತೆ, ವಿಜಯನಗರ

ಕರ್ನಾಟಕ ಮುಖ್ಯ ನ್ಯಾಯಮೂರ್ತಿ ಜಸ್ಟಿಸ್ ವಿಭು ಬಖ್ರು ಅವರು ಸಂಜೆ (ಜುಲೈ 6) 9 ಗಂಟೆಗೆ ಜಿಲ್ಲೆಗೆ ಆಗಮಿಸಿ ವಾಸ್ತವ್ಯ ಹೂಡುವರು. ಜುಲೈ 7 ರಂದು ಬೆಳಗ್ಗೆ 9 ಗಂಟೆಗೆ ಜಿಲ್ಲಾ ನ್ಯಾಯಾಲಯಕ್ಕೆ ಭೇಟಿ ಮತ್ತು ನ್ಯಾಯಾಂಗ ಇಲಾಖೆ ಪರಿಶೀಲನಾ ಸಭೆ ನಡೆಸುವರು. ನಂತರ ಮಧ್ಯಾಹ್ನ 12.15ಕ್ಕೆ ಚಿತ್ರದುರ್ಗ ಜಿಲ್ಲೆಗೆ ಪ್ರಯಾಣ ಬೆಳೆಸುವರು.

## ಡಿಪ್ಲೋಮಾ (ಕೃಷಿ) ಪ್ರವೇಶಾತಿ : ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಅಧೀನದಲ್ಲಿರುವ ರೇಷ್ಮೆ ಕೃಷಿ ಮಹಾವಿದ್ಯಾಲಯ, ಚಿಂತಾಮಣಿಯಲ್ಲಿ ನಡೆಸಲಾಗುವ ಎರಡು ವರ್ಷಗಳ ಡಿಪ್ಲೊಮಾ (ಕೃಷಿ) ಪ್ರವೇಶಾತಿಗೆ 2026–27ನೇ ಶೈಕ್ಷಣಿಕ ವರ್ಷದ ಕೋರ್ಸ್‌ಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಜುಲೈ 21 ರವರೆಗೆ ವಿಸ್ತರಿಸಲಾಗಿದೆ.

ಈ ಹಿಂದೆ ಅರ್ಜಿ ಸಲ್ಲಿಸಲು ಜೂನ್ 30 ರವರೆಗೆ ಅವಕಾಶ ನೀಡಲಾಗಿತ್ತು. ಆದರೆ, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಈ ಅವಧಿಯನ್ನು ಈಗ ಜುಲೈ 21 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ವಿವರ ಹಾಗೂ ಪ್ರವೇಶಾತಿ ಪ್ರಕ್ರಿಯೆಗಾಗಿ ಆಸಕ್ತರು ಕುಲಸಚಿವರ ಕಛೇರಿ, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ., ಬೆಂಗಳೂರು–560065 ಅಥವಾ ಡೀನ್ (ರೇಷ್ಮೆ ಕೃಷಿ), ರೇಷ್ಮೆ ಕೃಷಿ ಮಹಾವಿದ್ಯಾಲಯ, ಚಿಂತಾಮಣಿ ಇವರನ್ನು ಸಂಪರ್ಕಿಸಬಹುದು. ಹಾಗೂ ವೆಬ್‌ಸೈಟ್ : www.uasbangalore.edu.in ಅಥವಾ ದೂರವಾಣಿ ಸಂಖ್ಯೆ: 080–23330149, 080–23330984, 9449866914, 9916869534. ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಕೆಪಿಎಸ್‌ಸಿ: ಜಲಸಂಪನ್ಮೂಲ ಇಲಾಖೆ ಕಿರಿಯ ಇಂಜಿನಿಯರ್ ಹುದ್ದೆಗಳ ಅಂತಿಮ ಆಯ್ಕೆಪಟ್ಟಿ ಪ್ರಕಟ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚಿಸಿದ್ದ ಜಲಸಂಪನ್ಮೂಲ ಇಲಾಖೆಯಲ್ಲಿನ ಕಿರಿಯ ಇಂಜಿನಿಯರ್ (ಸಿವಿಲ್) 216+54 (ಸೇವಾನಿರತ ಅಭ್ಯರ್ಥಿಗಳು) ಹುದ್ದೆಗಳ ಅಂತಿಮ ಆಯ್ಕೆಪಟ್ಟಿ ಮತ್ತು ಕಟ್–ಆಫ್ ಅಂಕಗಳನ್ನು ಜುಲೈ 3 ರಂದು ಆಯೋಗದ ವೆಬ್‌ಸೈಟ್ http://kpsc.kar.nic.in/List ನಲ್ಲಿ ಪ್ರಕಟಿಸಲಾಗಿದೆ.

ಅಭ್ಯರ್ಥಿಗಳು ತಮ್ಮ ಮಾಹಿತಿ ಹಾಗೂ ಫಲಿತಾಂಶಕ್ಕಾಗಿ ಆಯೋಗದ ಅಧಿಕೃತ ವೆಬ್‌ಸೈಟ್ ಗೆ ಭೇಟಿ ನೀಡಿ ಪರಿಶೀಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜ್ಗಾರ್ ಸೇರಿದಂತೆ ಪ್ರಮುಖ ಯೋಜನೆಗಳ ಪ್ರಗತಿ ಪರಿಶೀಲನೆ : ಕೇಂದ್ರದಿಂದ ಸಹಕಾರದ ಭರವಸೆ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಕರ್ನಾಟಕದಲ್ಲಿ ಕೇಂದ್ರ ಸರ್ಕಾರದ ಪ್ರಮುಖ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನವು ಸುಗಮವಾಗಿ ಸಾಗುತ್ತಿದ್ದು, ಯೋಜನೆಗಳ ಪರಿಣಾಮಕಾರಿ ಜಾರಿಗಾಗಿ ರಾಜ್ಯಸರ್ಕಾರದೊಂದಿಗೆ ನಿರಂತರ ಸಹಕಾರ ಮುಂದುವರಿಸಲಾಗುವುದು ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ (MoRD) ಉನ್ನತ ಮಟ್ಟದ ಅಧಿಕಾರಿಗಳ ತಂಡ ತಿಳಿಸಿದೆ.

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯದ ಉಪ ಮಹಾನಿರ್ದೇಶಕರು (DDG) ಹಾಗೂ ಸಂಖ್ಯಾಶಾಸ್ತ್ರ ಸಲಹೆಗಾರರಾದ ಅಲ್ತಾಫ್ ಹುಸೇನ್ ಹಾಜಿ ನೇತೃತ್ವದ ತಂಡ ರಾಜ್ಯಕ್ಕೆ ಭೇಟಿ ನೀಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಯುಕ್ತರಾದ ದಿವ್ಯ ಪ್ರಭು ಅವರೊಂದಿಗೆ ಸಭೆ ನಡೆಸಿ, 'ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜ್ಗಾರ್ (VB-GRAMG)' ಯೋಜನೆಯ ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಿತು. ತಂಡದಲ್ಲಿ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಅಧೀನ ಕಾರ್ಯದರ್ಶಿಗಳಾದ ಅನಿಲ್ ಕುಮಾರ್ ಕೆ.ಸಿ ಹಾಗೂ ಗ್ರಾಮೀಣ ವಸತಿ ವಿಭಾಗದ ಸಹಾಯಕ ನಿರ್ದೇಶಕರಾದ ಬಲ್‌ದೇವ್ ಕುಮಾರ್ ವರ್ಮಾ ಉಪಸ್ಥಿತರಿದ್ದರು.



ರಾಜ್ಯದಲ್ಲಿ ಯೋಜನೆಯ ಅನುಷ್ಠಾನ ನಿಗದಿತ ವೇಳಾಪಟ್ಟಿಯಂತೆ ಪ್ರಗತಿಯಲ್ಲಿದ್ದು, ಯಾವುದೇ ಪ್ರಮುಖ ಅಡಚಣೆಗಳಿಲ್ಲ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು. ಯೋಜನೆಯ ಅನುಷ್ಠಾನವನ್ನು ಇನ್ನಷ್ಟು ಸುಗಮಗೊಳಿಸಲು ಕೆಲವು ಆಡಳಿತಾತ್ಮಕ ಹಾಗೂ ಕ್ರಿಯಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಲಾಯಿತು.

ಬಳಿಕ ಪ್ರಧಾನ ಮಂತ್ರಿ ಆವಾಸ್ ಯೋಜನೆ–ಗ್ರಾಮೀಣ (PMAY-G), ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ (PMGSY), ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ಹಾಗೂ ರಾಷ್ಟ್ರೀಯ ಸಾಮಾಜಿಕ ಸಹಾಯ ಕಾರ್ಯಕ್ರಮ (NSAP) ಸೇರಿದಂತೆ ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳ ಅನುಷ್ಠಾನ ಕುರಿತು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಮಗ್ರ ಪರಿಶೀಲನಾ ಸಭೆಯನ್ನು ನಡೆಸಲಾಯಿತು.

ಸಭೆಯಲ್ಲಿ ಯೋಜನೆಗಳ ಪ್ರಗತಿ, ಕೇಂದ್ರ–ರಾಜ್ಯ ಸಮನ್ವಯ, ಅನುಷ್ಠಾನದ ವೇಗ, ಮೇಲ್ವಿಚಾರಣಾ ವ್ಯವಸ್ಥೆ ಹಾಗೂ ಫಲಾನುಭವಿಗಳಿಗೆ ಸಮಯೋಚಿತವಾಗಿ ಯೋಜನೆಗಳ ಲಾಭ ತಲುಪಿಸುವ ಕುರಿತು ಸವಿಸ್ತಾರ ಚರ್ಚೆ ನಡೆಯಿತು.

ಈ ಸಂದರ್ಭದಲ್ಲಿ ಕೇಂದ್ರ ಸಚಿವಾಲಯದ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯ ತಾಂತ್ರಿಕ ನೆರವು, ಮೇಲ್ವಿಚಾರಣೆ ಹಾಗೂ ಸಾಮರ್ಥ್ಯ ವೃದ್ಧಿ ಕಾರ್ಯಕ್ರಮಗಳಲ್ಲಿ ಕೇಂದ್ರ ಸರ್ಕಾರವು ರಾಜ್ಯಕ್ಕೆ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದರು.

ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಇಲಾಖೆಗಳ ನಡುವಿನ ಸಮನ್ವಯ, ನಿರಂತರ ಮೇಲ್ವಿಚಾರಣೆ ಮತ್ತು ದತ್ತಾಂಶ ಆಧಾರಿತ ಆಡಳಿತ ವ್ಯವಸ್ಥೆ ಅತ್ಯಂತ ಅಗತ್ಯವೆಂದು ಅಧಿಕಾರಿಗಳು ಅಭಿಪ್ರಾಯಪಟ್ಟರು.

ಈ ಯೋಜನೆಗಳ ಪರಿಣಾಮಕಾರಿ ಅನುಷ್ಠಾನವು ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ, ಉದ್ಯೋಗಾವಕಾಶಗಳ ವೃದ್ಧಿ, ಮಹಿಳಾ ಸ್ವಸಹಾಯ ಸಂಘಗಳ ಸಬಲೀಕರಣ ಹಾಗೂ 'ವಿಕಸಿತ ಭಾರತ–2047' ಗುರಿ ಸಾಧನೆಯಲ್ಲಿ ಕರ್ನಾಟಕದ ಪಾತ್ರವನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

## ಗ್ರಾಮೀಣ ಜೀವನೋಪಾಯ ಮತ್ತು ಪರಂಪರೆ ರಕ್ಷಣೆಗೆ 'ನಬಾರ್ಡ್' ಸಹಭಾಗಿತ್ವ : ಜಿಐ ಉತ್ಪನ್ನಗಳಿಗೆ ಮನ್ನಣೆ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸುವ ಮತ್ತು ಗ್ರಾಮೀಣ ಭಾಗದ ಜನರ ಜೀವನೋಪಾಯವನ್ನು ಬಲಪಡಿಸುವ ಉದ್ದೇಶದಿಂದ, ನಬಾರ್ಡ್ ಸಂಸ್ಥೆಯು ರಾಜ್ಯದ ಭೌಗೋಳಿಕ ಸೂಚಕ (ಉಜಔಂಡಿಚಿಖ್ಞಿಛಿಚಿಟ ಋಟಿಜುಛಿಚಿಣಖಟಿ – ಉಋ) ಉತ್ಪನ್ನಗಳಿಗೆ ವ್ಯಾಪಕ ಬೆಂಬಲ ನೀಡುತ್ತಿದೆ ಎಂದು ನಬಾರ್ಡ್ ಮುಖ್ಯ ಮಹಾಪ್ರಬಂಧಕರಾದ ಡಾ. ಸುರೇಂದ್ರ ಬಾಬು ಅವರು ತಿಳಿಸಿದ್ದಾರೆ.ಪ್ರಸ್ತುತ ಭಾರತದಲ್ಲಿ ಒಟ್ಟು 822 ಜಿಐ ನೋಂದಣಿಗಳಿದ್ದು, ಈ ಪೈಕಿ ಕರ್ನಾಟಕವೊಂದೇ 51 ಉತ್ಪನ್ನಗಳ ಜಿಐ ಟ್ಯಾಗ್ ಹೊಂದುವ ಮೂಲಕ ದೇಶದಲ್ಲೇ ಗಮನಾರ್ಹ ಸಾಧನೆ ಮಾಡಿದೆ.ಈ ಹಿಂದೆ 'ಕರಿ ಇಶಾದ್ ಮಾವಿನ ಹಣ್ಣಿಗೆ' (Kari Ishad Mangoes) ಜಿಐ ನೋಂದಣಿ ಪ್ರಕ್ರಿಯೆಗೆ ನೆರವಾಗಿದ್ದ ನಬಾರ್ಡ್, ಪ್ರಸಕ್ತ ಆರ್ಥಿಕ ವರ್ಷದಲ್ಲಿ (2025–26) ರಾಜ್ಯದ ನಾಲ್ಕು ವಿಶಿಷ್ಟ ಉತ್ಪನ್ನಗಳನ್ನು ಜಿಐ ನೋಂದಣಿಗೆ ಒಳಪಡಿಸಲು ಮುಂದಾಗಿದೆ.

ತಿಪಟೂರು ಕೊಬ್ಬರಿ (Tiptur Coconut), ಹೊಯ್ಸಳ ಶೈಲಿಯ ಶಿಲ್ಪಕಲೆ (Hoysala Style Stone Art), ಸಾಣಿಕಟ್ಟೆ ಉಪ್ಪು (Sanikatte Salt), ಹಾಗೂ ಹವಾಮಾನ ವೈಪರೀತ್ಯ ತಡೆದುಕೊಳ್ಳುವ ತರಕಾರಿ ಜಾತಿಗೆ ಸೇರಿದ ಕುನಬಿಮುದ್ಲಿ ಗಡ್ಡೆ (KunbiMudli) ಸೇರಿದೆ.

ಕೇವಲ ನೋಂದಣಿಗೆ ಮಾತ್ರ ಸೀಮಿತವಾಗದೆ, ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಮಾರುಕಟ್ಟೆ ವಿಸ್ತರಣೆಗೂ ನಬಾರ್ಡ್ ಗಮನಹರಿಸಿದೆ. ನೇಕಾರರು ಮತ್ತು ಕುಶಲಕರ್ಮಿಗಳಿಗೆ ಮಾರುಕಟ್ಟೆ ಸೌಲಭ್ಯ ಕಲ್ಪಿಸಿದೆ.

**ಐಹೊಳೆಯಲ್ಲಿ ಜಿಐ ಸ್ಟೋರ್:** ಪ್ರವಾಸಿಗರನ್ನು ಆಕರ್ಷಿಸಲು ಬಾಗಲಕೋಟೆಯ ಐತಿಹಾಸಿಕ ತಾಣವಾದ ಐಹೊಳೆಯಲ್ಲಿ 'ಇಳಕಲ್ ಸೀರೆಗಳ' ವಿಶೇಷ ಜಿಐ ಸ್ಟೋರ್ ಶೀಘ್ರದಲ್ಲೇ ಉದ್ಘಾಟನೆಗೊಳ್ಳಲಿದೆ. ಇದು ದೇಶಿ ಮತ್ತು ವಿದೇಶಿ ಪ್ರವಾಸಿಗರಿಗೆ ಅಧಿಕೃತ ಜಿಐ ಉತ್ಪನ್ನಗಳನ್ನು ಖರೀದಿಸಲು ಸೂಕ್ತ ವೇದಿಕೆಯಾಗಲಿದೆ.ಸಾಂಪ್ರದಾಯಿಕ ಉತ್ಪನ್ನಗಳನ್ನು ಸುಸ್ಥಿರ ಮತ್ತು ಲಾಭದಾಯಕ ಉದ್ಯಮಗಳನ್ನಾಗಿ ಪರಿವರ್ತಿಸುವುದು, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಮೂಲಕ ಗ್ರಾಮೀಣ ಭಾಗದ ಆರ್ಥಿಕತೆಯನ್ನು ಬಲಪಡಿಸುವುದೇ ನಮ್ಮ ಮುಖ್ಯ ಉದ್ದೇಶವಾಗಿದೆ ಎಂದು ನಬಾರ್ಡ್‌ನ ಮುಖ್ಯ ಮಹಾಪ್ರಬಂಧಕರಾದ ಡಾ. ಸುರೇಂದ್ರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರಿವು ವಿದ್ಯಾಭ್ಯಾಸ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ತುಮಕೂರು

ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ವಿದ್ಯಾಭ್ಯಾಸ ಸಾಲಕ್ಕಾಗಿ ಅರ್ಹ ಕ್ರಿಶ್ಚಿಯನ್ ಸಮುದಾಯದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿ.ಇ.ಟಿ. ಅಥವಾ ನೀಟ್ ಅಥವಾ ಜೆ.ಇ.ಇ. ಮೂಲಕ ಆಯ್ಕೆಯಾದ ಎಂ.ಬಿ.ಬಿ.ಎಸ್, ಎಂ.ಡಿ./ ಎಂ.ಎಸ್. ಕೋರ್ಸುಗಳಿಗೆ ಸರ್ಕಾರಿ ಕಾಲೇಜು /ಖಾಸಗಿ ಮ್ಯಾನೇಜ್‌ಮೆಂಟ್ ಕೋಟಾದಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗರಿಷ್ಠ 5ಲಕ್ಷ ರೂ.ಗಳವರೆಗೆ ಸಾಲ ನೀಡಲಾಗುವುದು.

ವೃತ್ತಿಪರ ಕೋರ್ಸುಗಳಾದ ಎಂ.ಬಿ.ಬಿ.ಎಸ್, ಎಂ.ಡಿ., ಬಿ.ಡಿ.ಎಸ್, ಎಂ.ಡಿ.ಎಸ್, ಬಿ.ಆಯುಷ್, ಎಂ.ಆಯುಷ್, ಬಿ.ಇ., ಬಿ.ಟೆಕ್, ಎಂ.ಟೆಕ್, ಎಂಇ, ಬಿ.ಆರ್ಕಿಟೆಕ್ಚರ್, ಎಂ. ಆರ್ಕಿಟೆಕ್ಚರ್, ಎಂ.ಬಿ.ಎ., ಎಂ.ಸಿ.ಎ., ಎಲ್.ಎಲ್.ಬಿ., ಬಿಎಸ್ಸಿ ಇನ್ ಹಾರ್ಟಿಕಲ್ಚರ್/ಅಗ್ರಿಕಲ್ಚರ್, ಅಗ್ರಿಕಲ್ಚರ್ ಇಂಜಿನಿಯರಿಂಗ್, ಡೈರಿ ಟೆಕ್ನಾಲಜಿ, ಫಾರೆಸ್ಟ್ರಿ, ವೆಟರ್ನರಿ ಮತ್ತು ಅನಿಮಲ್ ಸೈನ್ಸ್, ಫುಡ್ ಟೆಕ್ನಾಲಜಿ, ಬಯೋಟೆಕ್ನಾಲಜಿ, ಫಿಷರೀಸ್, ಸಿರಿಕಲ್ಚರ್, ಹೋಂ/ ಕಮ್ಯೂನಿಟಿ ಸೈನ್ಸ್, ಫುಡ್ ನ್ಯೂಟ್ರಿಷಿಯನ್ ಅಂಡ್ ಡೈಯಟೆಟಿಕ್ಸ್, ಬಿ.ಫಾರ್ಮಾ, ಎಂ.ಫಾರ್ಮ, ಫಾರ್ಮ ಡಿ. ಮತ್ತು ಡಿ.ಫಾರ್ಮ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಆನ್‌ಲೈನ್ https://kccdclonline.karnataka.gov.in ಮುಖಾಂತರ ಸೆಪ್ಟೆಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲನಾ ಅಜಾದ್ ಭವನ, ಇಂದಿರಾ ಕಾಲೇಜು ಮುಂಭಾಗ, ಉಪ್ಪಾರಹಳ್ಳಿ, ತುಮಕೂರು ಅಥವಾ ದೂ.ವಾ.ಸಂ. 0816–2281023 ಅಥವಾ ಸಹಾಯವಾಣಿ ಸಂಖ್ಯೆ 6360753075ನ್ನು ಸಂಪರ್ಕಿಸಬೇಕೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ. ಶ್ಯಾಮ್ ಪ್ರಸಾದ್ ಮುಖರ್ಜಿ ಜನ್ಮದಿನಾಚರಣೆ




■ ಗಣಿನಾಡವಾಣಿ ವಾರ್ತೆ, ಕಂಪ್ಲಿ

ಪಟ್ಟಣದ ಕೊಟ್ಟಾಲ್ ರಸ್ತೆಯ ಮಾಜಿ ಶಾಸಕ ಟಿ.ಎಚ್.ಸುರೇಶ್ ಬಾಬು ಅವರ ನಿವಾಸದ ತುಂಗಭದ್ರ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿಯ ಸಂಸ್ಥಾಪಕ ಹಾಘೂ ಹಿರಿಯ ರಾಜಕಾರಣಿ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಜನ್ಮದಿನವನ್ನು ಸೋಮವಾರ ಅರ್ಥಪೂರ್ಣವಾಗಿ ಆಚರಿಸಿದರು.

ನಂತರ ಕಂಪ್ಲಿ ವಿಧಾನಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿಯ ಬಿಎಲ್‌ಎ1 ಗುರ್ತಿ ಶ್ರೀನಿವಾಸ ಮಾತನಾಡಿ, ಜಗತ್ತಿಗೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ಜೀವನ ನಡೆಸಬೇಕು.

ಪೋಷಕರು ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸಿದಾಗ ಮಾತ್ರ ದೇಶದ ಉತ್ತಮ ಪ್ರಜೆಗಳಾಗಿ ಹೊರ ಹೊಮ್ಮಲು ಸಾಧ್ಯ. ಬಿಜೆಪಿ ಪಕ್ಷ ವಿಶ್ವದಲ್ಲೇ ಅತಿಹೆಚ್ಚು ಸದಸ್ಯತ್ವ ಹೊಂದಲು ಭದ್ರ ಬುನಾದಿ ಹಾಕಿಕೊಟ್ಟವರು ಧೀಮಂತ ನಾಯಕ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿಯಾಗಿದ್ದಾರೆ. ಅವರು ರಾಜಕೀಯ ಚತುರರಾಗಿದ್ದರು. ನ್ಯಾಯವಾದಿ ಮತ್ತು ಶಿಕ್ಷಣತಜ್ಞರಾಗಿದ್ದು, ನಮ್ಮ ದೇಶದ ಸರ್ವತೋಮುಖ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವ ನಿಟ್ಟಿನಲ್ಲಿ ಮಾಡಿದ ಕಾರ್ಯಗಳು ಸ್ಮರಣೀಯ ಎಂದರು.

ಇಲ್ಲಿ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ, ಮುಖಂಡರಾದ ಅಳ್ಳಳ್ಳಿ ವಿರೇಶ, ಎಸ್.ಚಂದ್ರಶೇಖರಗೌಡ, ಮನೋಜ್‌ಗೌಡ, ಪಕ್ಕೀರಪ್ಪ, ಪ್ರಶಾಂತ್, ಬಸವಪ್ರಭು, ಕಟ್ಟೆ ವಿಶ್ವ, ಮುರಳಿರೆಡ್ಡಿ, ಎಸ್. ಆರ್.ಕಾರ್ತಿಕ, ಭಾಸ್ಕರ್, ವಿರುಪಾಕ್ಷಿ ಸೇರಿದಂತೆ ಅನೇಕರಿದ್ದರು.

## ಲಲಿತಕಲಾ ಅಕಾಡೆಮಿಯಿಂದ ಚಿತ್ರಕಲಾ ವಿದ್ಯಾರ್ಥಿಗಳಿಗೆ ವಿಶೇಷ ಸ್ಪರ್ಧೆ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಕರ್ನಾಟಕ ಲಲಿತಕಲಾ ಅಕಾಡೆಮಿಯು ಪ್ರಪ್ರಥಮ ಬಾರಿಗೆ ಚಿತ್ರಕಲಾ ವಿದ್ಯಾರ್ಥಿಗಳಿಗಾಗಿ ವಿಶೇಷವಾದ ರಾಜ್ಯ ಮಟ್ಟದ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಿದೆ.

ಕರ್ನಾಟಕದ ಯಾವುದೇ ಕಲಾ ಶಾಲೆಗಳಲ್ಲಿ ಯಾವುದೇ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಈ ಸ್ಪರ್ಧೆಯ ಮೂಲಕ ಮುಕ್ತ ಅವಕಾಶವನ್ನು ಕಲ್ಪಿಸಿಕೊಡಲಾಗಿದ್ದು, ಅರ್ಜಿ ಸಲ್ಲಿಸಲು 2026 ಆಗಸ್ಟ್ 06 ಕೊನೆಯ ದಿನಾಂಕವಾಗಿದೆ.ಈ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು ತಾವು ರಚಿಸಿರುವ ಕಲಾಕೃತಿಗಳ 2 ಭಾವಚಿತ್ರಗಳು ಹಾಗೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಚಿತ್ರಕಲಾ ಶಾಲೆಯ ಪ್ರಾಂಶುಪಾಲರಿಂದ ಪಡೆದ ದೃಢೀಕರಣ ಪತ್ರದೊಂದಿಗೆ ಅರ್ಜಿ ಸಲ್ಲಿಸಬೇಕು.ಗೂಗಲ್ ಫಾರ್ಮ್ ಮೂಲಕ ಆನ್‌ಲೈನ್‌ನಲ್ಲಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಲ್ಲಿಸಬೇಕು. ಅಧಿಕೃತ ವೆಬ್‌ಸೈಟ್ www.lalitkala.karnataka.gov.in ಮೂಲಕ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.ಹೆಚ್ಚಿನ ಮಾಹಿತಿಗಾಗಿ 080 – 22480297 ಅನ್ನು ಸಂಪರ್ಕಿಸಬಹುದಾಗಿದೆ. ಈ ಶಿಬಿರದಲ್ಲಿ ಅತ್ಯುತ್ತಮ ಚಿತ್ರ ರಚಿಸುವ ಕನಿಷ್ಠ 6 ಹಾಗೂ ಗರಿಷ್ಠ 10 ವಿದ್ಯಾರ್ಥಿಗಳನ್ನು ಅಂತಿಮವಾಗಿ ಆಯ್ಕೆ ಮಾಡಿ ರೂ. 15,000/– ನಗದು ಬಹುಮಾನ, ಸ್ಮರಣಿಕೆ ಮತ್ತು ಪ್ರಮಾಣ ಪತ್ರ ನೀಡಲಾಗುತ್ತದೆ.ಇದರೊಂದಿಗೆ "2025ರ ಉತ್ತಮ ಕಲಾ ವಿದ್ಯಾರ್ಥಿ" ಎಂಬ ಪ್ರಮಾಣ ಪತ್ರವನ್ನು ನೀಡಿ ಪುರಸ್ಕರಿಸಲಾಗುವುದು.ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆಯನ್ನು ವಿಸ್ತರಿಸಲು ಈ ಸುವರ್ಣ ಅವಕಾಶವನ್ನು ಬಳಸಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಾಗಿ ಅಕಾಡೆಮಿಯ ರಿಜಿಸ್ಟ್ರಾರ್ ಎನ್. ನಮ್ರತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಬೆಂಗಳೂರಿನ ಕೆ.ಆರ್. ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯವು (ಯುವಿಸಿಇ) 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ವಿವಿಧ ವಿಭಾಗಗಳಲ್ಲಿ ಖಾಲಿ ಇರುವ ಅತಿಥಿ ಉಪನ್ಯಾಸಕರ ಹುದ್ದೆಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಬಿ.ಟೆಕ್, ಎಂ.ಟೆಕ್, ಬಿ.ಆರ್ಕ್ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ವಿಷಯಗಳನ್ನು ಬೋಧಿಸಲು Ph.D / M.Tech /PG ಪದವಿಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಎಐಸಿಟಿಇ / ಯುಜಿಸಿ ನಿಯಮಗಳ ಪ್ರಕಾರ ಅತಿಥಿ ಉನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ www.uvce.karnataka.gov.in ನಿಂದ ನಿಗದಿತ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳ ಪ್ರತಿಗಳೊಂದಿಗೆ ಕುಲಸಚಿವರ ಕಚೇರಿ, ಯುವಿಸಿಇ, ಕೆ.ಆರ್. ವೃತ್ತ, ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಜುಲೈ 13 ಕೊನೆಯ ದಿನಾಂಕವಾಗಿದ್ದು, ನಿಗದಿತ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸಂದರ್ಶನದ ದಿನಾಂಕವನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಅಥವಾ ಅರ್ಹ ಅಭ್ಯರ್ಥಿಗಳಿಗೆ ನೇರವಾಗಿ ತಿಳಿಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಯುವಿಸಿಇ ಕುಲಸಚಿವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಜುಲೈ 10 ರಂದು ಭಾರತ್ ಸೌಟ್ಸ್ ಮತ್ತು ಗೈಡ್ಸ್ "ರಾಜ್ಯ ಪುರಸ್ಕಾರ ಪ್ರಶಸ್ತಿ ಪತ್ರ ಪ್ರದಾನ ಸಮಾರಂಭ"

■ ಗಣಿನಾಡವಾಣಿ ವಾರ್ತೆ, ಬೆಂಗಳೂರು

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಕೇಂದ್ರ ಕಾರ್ಯಾಲಯದ ವತಿಯಿಂದ ಕಬ್ಸ್, ಬುಲ್‌ಬುಲ್ಸ್, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್ ತಂಡಗಳಿಗೆ ಪ್ರತಿಷ್ಠಿತ ಚತುರ್ಥ ಚರಣ್, ಹೀರಕ್ ಪಂಖ್ ಹಾಗೂ ರಾಜ್ಯ ಪುರಸ್ಕಾರ ಪ್ರಶಸ್ತಿ ಪ್ರಮಾಣ ಪತ್ರ ಪ್ರದಾನ ಸಮಾರಂಭವನ್ನು ಜುಲೈ 10 ರಂದು ಸಂಜೆ 4.00 ಗಂಟೆಗೆ ಬೆಂಗಳೂರಿನ ಲೋಕಭವನದ ಗಾಜಿನ ಮನೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಭವ್ಯ ಸಮಾರಂಭದಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಪೋಷಕರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಪಾಲ್ಗೊಂಡು ಪ್ರಶಸ್ತಿ ಪತ್ರಗಳನ್ನು ಪ್ರದಾನ ಮಾಡಲಿದ್ದಾರೆ. ಮುಖ್ಯಮಂತ್ರಿಗಳು ಹಾಗೂ ಸಂಸ್ಥೆಯ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಅಪರ ರಾಜ್ಯ ಮುಖ್ಯ ಆಯುಕ್ತರಾದ ಯು.ಟಿ. ಖಾದರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ರಶ್ಮಿ ವಿ. ಮಹೇಶ್, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ವಿಕಾಸ್ ಕಿಶೋರ್ ಸುರಳ್ಕರ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷರಾದ ಕೊಂಡಜ್ಜಿ ಬಿ. ಷಣ್ಮುಖಪ್ಪ, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷರು ಮತ್ತು ಪರಿಸರ ನಿರ್ವಹಣೆ ಮತ್ತು ನೀತಿ ಸಮಶೋಧನಾ ಸಂಸ್ಥೆಯ ಅಧ್ಯಕ್ಷರಾದ ಎ.ಎನ್. ಮಹೇಶ್, ಭಾರತ್ ಸೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತರಾದ ಡಾ. ಪಿ.ಜಿ.ಆರ್. ಸಿಂಧ್ಯ ಅವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

## ನೈಸರ್ಗಿಕ ಹಾಗೂ ಸಾವಯವ ಕೃಷಿ ಕುರಿತು ಮೂರು ದಿನಗಳ ಉಚಿತ ವಸತಿಯುಕ್ತ ತರಬೇತಿ

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಜಿಲ್ಲೆಯ ಆಸಕ್ತ ರೈತರಿಗೆ ನೈಸರ್ಗಿಕ ಹಾಗೂ ಸಾವಯವ ಕೃಷಿಯ ಕುರಿತು ಇದೇ ಜುಲೈ 09 ರಿಂದ 11 ರವರೆಗೆ ಮೂರು ದಿನಗಳ ವಸತಿಯುಕ್ತ ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ತರಬೇತಿಯ ಮೊದಲನೇ ದಿನ ಬ್ಯಾಡರಹಳ್ಳಿ ಗ್ರಾಮದ ಪ್ರಗತಿಪರ ಸಾವಯವ ಕೃಷಿಕರಾದ ಇಂದೂಧರ ಅವರು ತಮ್ಮ ಜಮೀನಿನಲ್ಲಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಅಳವಡಿಸಿಕೊಂಡ ಸಾವಯವ ಕೃಷಿ ಪದ್ಧತಿಗಳು, ನೀರು ಮತ್ತು ಪೋಷಕಾಂಶಗಳ ನಿರ್ವಹಣೆ ಹಾಗೂ ರೋಗ ಮತ್ತು ಕೀಟ ನಿರ್ವಹಣಾ ಕ್ರಮಗಳ ಕುರಿತು ಮಾಹಿತಿ ನೀಡುವರು. ನಂತರ ಜೀವಾಮೃತ, ಬೀಜಾಮೃತ, ಘನ ಜೀವಾಮೃತ, ದಶಪರ್ಣಿ, ಸಸ್ಯ ಪ್ರಚೋದಕಗಳನ್ನು ಪ್ರಾತ್ಯಕ್ಷಿಕೆ ಮೂಲಕ ತಯಾರಿಸಿ ರೈತರಿಗೆ ಮನವರಿಕೆ ಮಾಡಲಾಗುವುದು.

ತರಬೇತಿಯ ಎರಡನೇ ದಿನ ಮಲ್ಟಿಪ್ಲೆಕ್ಸ್ ಬಯೋಟೆಕ್ ಪ್ರೈವೇಟ್ ಲಿಮಿಟೆಡ್ ತುಮಕೂರು ಸಂಸ್ಥೆಯ ತಾಂತ್ರಿಕ ಮುಖ್ಯಸ್ಥರಾದ ಕುಮಾರ್ ಅವರು ಸಾವಯವ ಕೃಷಿಯ ಅವಶ್ಯಕತೆ, ಉಪಯೋಗ ಸಾವಯವ ಕೃಷಿಯಲ್ಲಿ ಜೈವಿಕ ಗೊಬ್ಬರಗಳ ಮತ್ತು ಜೈವಿಕ ಪೀಡೆನಾಶಕಗಳ ಬಳಕೆ ಹಾಗೂ ಅಡಿಕೆ ಸಿಪ್ಪೇಯಿಂದ ಕಾಂಪೋಸ್ಟ್ ತಯಾರಿಸುವ ವಿಧಾನದ ಕುರಿತು ರೈತರಿಗೆ ಪ್ರಾತ್ಯಕ್ಷಿಕೆ ಮೂಲಕ ತಿಳಿಸಿಕೊಡುವರು .

ತರಬೇತಿಯ ಮೂರನೇ ದಿನ ರೈತರಿಗೆ ಎರೆಹುಳು ಗೊಬ್ಬರ ತಯಾರಿಕೆ ಹಾಗೂ ವಿವಿಧ ಕಾಂಪೋಸ್ಟ್ ತಯಾರಿಕ ಪದ್ಧತಿಗಳ ಕುರಿತು ಮಾಹಿತಿ ಮತ್ತು ಪ್ರಾತ್ಯಕ್ಷಿಕೆ ಮೂಲಕ ತೋರಿಸಿಕೊಡಲಾಗುವುದು. ತರಬೇತಿಯಲ್ಲಿ ಭಾಗವಹಿಸುವ ಎಲ್ಲ ರೈತ ಬಾಂಧವರಿಗೂ ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ತಯಾರಿಸುವ ಕಾಂಪೋಸ್ಟ್ ಕಲ್ಚರ್ ಅನ್ನು ಉಚಿತವಾಗಿ ವಿತರಿಸಲಾಗುವುದು. ಆದ ಪ್ರಯುಕ್ತ ಆಸಕ್ತ 50 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ಮೊಬೈಲ್ ಸಂಖ್ಯೆ 8277931058 ಗೆ ಕರೆಮಾಡಿ ತರಬೇತಿಯ ಸದುಪಯೋಗ ಪಡೆದು ಕೊಳ್ಳಬೇಕು ಎಂದು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ಅರ್ಜಿ ಸಲ್ಲಿಸಲು ಕೊನೆಯ ದಿನ. 2026–27ನೇ ಸಾಲಿನ ಸಾಮಾನ್ಯ ಪದವಿ ಮಟ್ಟದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ (STATE HOSTEL PORTAL) ಅಧಿಕೃತ ವೆಬ್‌ಸೈಟ್ ಆದ https://shp.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವಿದ್ಯಾರ್ಥಿಗಳು ತಮ್ಮ ಹತ್ತಿರದ ತಾಲೂಕು ವಿಸ್ತರಣಾಧಿಕಾರಿಗಳ ಕಚೇರಿ, ಸಂಬಂಧಪಟ್ಟ ವಿದ್ಯಾರ್ಥಿನಿಲಯಗಳು ಅಥವಾ ಅಲ್ಪಸಂಖ್ಯಾತರ ಜಿಲ್ಲಾ/ತಾಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಗಸ್ಟ್ ಅಂತ್ಯಕ್ಕೆ ಚಿತ್ರದುರ್ಗ ಶಾಖಾ ಕಾಲುವೆ ಪ್ರಾಯೋಗಿಕ ಚಾಲನೆ

### ಭದ್ರಾ ಮೇಲ್ದಂಡೆ ಯೋಜನೆ : 2028ರ ವೇಳೆಗೆ ಸಿವಿಲ್ ಕಾಮಗಾರಿ ಪೂರ್ಣ : ಸಚಿವ ರಾಮಲಿಂಗಾರೆಡ್ಡಿ

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

'ಭದ್ರಾ ಮೇಲ್ದಂಡೆ ಯೋಜನೆ' ಕಾಮಗಾರಿಗಳಿಗೆ ವೇಗ ನೀಡಲಾಗಿದ್ದು, 2028ರ ಒಳಾಗಾಗಿ ಎಲ್ಲಾ ಸಿವಿಲ್ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು. ಯೋಜನೆಯ ಪ್ರಮುಖ ಅಂಗವಾದ ಚಿತ್ರದುರ್ಗ ಶಾಖಾ ಕಾಲುವೆಗೆ, ಭದ್ರಾ ಜಲಾಶಯದಲ್ಲಿ ನೀರಿನ ಲಭ್ಯತೆ ಆಧರಿಸಿ ಮುಂಬರುವ ಆಗಸ್ಟ್–2026 ವೇಳಗೆ ಪ್ರಾಯೋಗಿಕವಾಗಿ ನೀರನ್ನು ಹರಿಸಿ ಚಾಲನೆ ನೀಡಲಾಗುವುದು ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.



ಭಾನುವಾರ ಚಿತ್ರದುರ್ಗ ಶಾಖಾ ಕಾಲುವೆ ಗೋನೂರು ಅಕ್ವಾ ಡಕ್ಟ್ ಕಾಮಗಾರಿ ವೀಕ್ಷಿಸಿದ ಸಚಿವ ರಾಮಲಿಂಗಾರೆಡ್ಡಿ ಅವರು ನಂತರ ಚಿತ್ರದುರ್ಗ ನಗರದ ಭದ್ರಾ ಮೇಲ್ದಂಡೆ ಯೋಜನಾ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ದಶಕಗಳಿಂದ ನೆನೆಗುದಿಗೆ ಬಿದ್ದಿರುವ ಹಾಗೂ ಈ ಭಾಗದ ರೈತರ ಬಹುಕಾಲದ ಕನಸಾಗಿರುವ ಭದ್ರಾ ಮೇಲ್ದಂಡೆ ಯೋಜನೆಯನ್ನು 2028ರ ವೇಳೆಗೆ ಸಂಪೂರ್ಣವಾಗಿ ಪೂರ್ಣಗೊಳಿಸಿ, ಜನರಿಗೆ ನೀರು ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಚಿತ್ರದುರ್ಗ ಶಾಖಾ ಕಾಲುವೆಯು ಒಟ್ಟು 134.597 ಕಿಲೋಮೀಟರ್ ಉದ್ದವನ್ನು ಹೊಂದಿದ್ದು, ಇದಕ್ಕೆ 16.36 ಟಿ.ಎಂ.ಸಿ ನೀರನ್ನು ಹಂಚಿಕೆ ಮಾಡಲಾಗಿದೆ. ಈ ಮೂಲಕ ಜಗಳೂರು ಶಾಖಾ ಕಾಲುವೆ ಸೇರಿದಂತೆ ಚಳ್ಳಕೆರೆ, ಪಾವಗಡ, ಹೊಳಲ್ಕೆರೆ ಮತ್ತು ಮೊಳಕಾಲ್ಮೂರು ತಾಲೂಕುಗಳ ಕೆರೆಗಳನ್ನು ತುಂಬಿಸಲಾಗುವುದು. ಚಿತ್ರದುರ್ಗ ಶಾಖಾ ಕಾಲುವೆಯ ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರದ ಹತ್ತಿರವಿರುವ ವೈ–ಜಂಕ್ಷನ್‌ನಿಂದ ಚಿತ್ರದುರ್ಗ ತಾಲೂಕಿನ ಗೋನೂರು ಅಕ್ವೆಡಕ್ಟರೆಗಿನ ಒಟ್ಟು 114 ಕಿಲೋಮೀಟರ್ ವ್ಯಾಪ್ತಿಯ ಎಲ್ಲಾ ಭೂಸ್ವಾಧೀನ ಪ್ರಕ್ರಿಯೆಯ ಅಡೆತಡೆಗಳು ಸಂಪೂರ್ಣವಾಗಿ ನಿವಾರಣೆಯಾಗಿವೆ. ಹೆಗಡೆಹಳ್ಳಿಯ ಬಳಿ 200 ಮೀಟರ್ ಕಲ್ಲು ಬಂಡೆಗಳ ಹಾಸು ಎದುರಾಗಿದ್ದು, ಶೀಘ್ರವೇ ಕಲ್ಲು ಬಂಡೆ ತೆರವುಗೊಳಿಸಿ ಯೋಜನೆ ಪೂರ್ಣಗೊಳಿಸಲು ತಾಕೀತು ಮಾಡಿದ್ದೇನೆ. ಉಳಿದಂತೆ ಕಾಲುವೆ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಭದ್ರಾ ಜಲಾಶಯದಲ್ಲಿ ನೀರಿನ ಲಭ್ಯತೆಗೆ ಅನುಗುಣವಾಗಿ, ಮುಂಬರುವ ಆಗಸ್ಟ್–2026 ಪ್ರಾಯೋಗಿಕವಾಗಿ ಕಾಲುವೆಯಲ್ಲಿ ನೀರನ್ನು ಹರಿಸಲು ಇಲಾಖೆಯು ಸರ್ವಸನ್ನದ್ಧವಾಗಿ ಯೋಜಿಸಿದೆ. ಈ ಪ್ರಾಯೋಗಿಕ ನೀರು ಹರಿಸುವ ಸಂದರ್ಭದಲ್ಲಿ ನಾಲ್ಕು ತಾಲೂಕುಗಳ ಒಟ್ಟು 78 ಕೆರೆಗಳಿಗೆ ನೀರನ್ನು ತುಂಬಿಸಲು ಯೋಜಿಸಲಾಗಿದ್ದು, ಇದರಲ್ಲಿ ಹೊಸದುರ್ಗದ 32 ಕೆರೆಗಳು, ಹೊಳಲ್ಕೆರೆಯ 30 ಕೆರೆಗಳು, ಹಿರಿಯೂರಿನ 12 ಕೆರೆಗಳು ಹಾಗೂ ಚಿತ್ರದುರ್ಗ ತಾಲೂಕಿನ 4 ಕೆರೆಗಳು ಒಳಗೊಂಡಿವೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಚಿತ್ರದುರ್ಗ ಶಾಖಾ ಕಾಲುವೆಯ ಒಟ್ಟು ಅಚ್ಚುಕಟ್ಟು ಪ್ರದೇಶ 1,20,465 ಹೆಕ್ಟೇರ್ ಆಗಿದ್ದು, ಯೋಜನಾ ವರದಿಯಲ್ಲಿದ್ದ 157 ಕೆರೆಗಳ ಜೊತೆಗೆ ಹೆಚ್ಚುವರಿಯಾಗಿ 383 ಕೆರೆಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗಿದೆ. ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಅವರು ಚಿತ್ರದುರ್ಗ ತಾಲ್ಲೂಕಿನ 8 ಕೆರೆಗಳನ್ನು ಯೋಜನೆಯಡಿ ತುಂಬಿಸಲು ಮನವಿ ಮಾಡಿದ್ದಾರೆ. ಈ ವಿಷಯ ಮಂಡಳಿ ಸಭೆಯಲ್ಲಿ ಚರ್ಚಿಸಿ ಅನುಮೋದನೆ ನೀಡುವುದಾಗಿ ಸಚಿವ ರಾಮಲಿಂಗಾರೆಡ್ಡಿ ಭರವಸೆ ನೀಡಿದರು.

ಯೋಜನೆಯಲ್ಲಿ ನಡೆದಿರಬಹುದಾದ ಲೋಪದೋಷಗಳು ಹಾಗೂ ಕಾಮಗಾರಿಯ ಗುಣಮಟ್ಟದ ಬಗ್ಗೆ ಹಾಗೂ ಯೋಜನೆಯಡಿ ವಿತರಣಾ ನಾಲೆಗಳು ಹಾಗೂ ಪೈಪ್‌ಲೈನ್‌ಗಳ ಸ್ಥಿತಿಗತಿ ಕುರಿತು ಮರು ಸಮೀಕ್ಷೆ ನಡೆಸಲು ಆದೇಶಿಸಲಾಗಿದೆ. ವಿತರಣಾ ಕಾಲುವೆಗಳು ಎಲ್ಲೆಲ್ಲಿ ಹಾನಿಗೊಳಗಾಗಿವೆ ಅಥವಾ ಪೈಪ್‌ಗಳು ನಿರುಪಯುಕ್ತವಾಗಿ ಬಿದ್ದಿವೆ ಎಂಬುದನ್ನು ಪತ್ತೆಹಚ್ಚಿ, ಅವುಗಳನ್ನು ದುರಸ್ತಿಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಯೋಜನೆ ಪೂರ್ಣ ಸ್ಥಿತಿಗತಿಗಳನ್ನು ತಿಳಿದು ಕೊಳ್ಳುವ ಸಲುವಾಗಿ ವಾರದ ಒಳಗೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವುದಾಗಿ ಪತ್ರಕರ್ತರ ಪ್ರಶ್ನೆಗೆ ಸಚಿವ ರಾಮಲಿಂಗಾರೆಡ್ಡಿ ಉತ್ತರಿಸಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆಯಡಿ ಜಿಲ್ಲೆಯ ವಿವಿಧ ತಾಲೂಕುಗಳ ಕೆರೆಗಳಿಗೆ ನೀರು ಉಣಿಸುವ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ನೀರಾವರಿ ಹಾಗೂ ಕುಡಿಯುವ ನೀರಿನ ಸಮಸ್ಯೆ ನೀಗಿಸುವ ನಿಟ್ಟಿನಲ್ಲಿ ಭದ್ರಾ ಮೇಲ್ದಂಡೆ ಯೋಜನೆಯು ಅತ್ಯಂತ ಮಹತ್ವದ್ದಾಗಿದೆ. ಈ ಯೋಜನೆಯ ವ್ಯಾಪ್ತಿಗೆ ಒಳಪಡುವ ಕಡೂರು, ತರೀಕೆರೆ, ಹೊಸದುರ್ಗ, ಹೊಳಲ್ಕೆರೆ, ಹಿರಿಯೂರು ಹಾಗೂ ನಮ್ಮ ಚಳ್ಳಕೆರೆ, ಮೊಳಕಾಲ್ಮೂರು ತಾಲೂಕುಗಳ ಕೆರೆಗಳಿಗೆ ನೀರು ಕೊಡುವ ಕೆಲಸವನ್ನು ಮುಂದಿನ ವರ್ಷದಲ್ಲಿ ಮುಗಿಸಬೇಕೆಂದು ಉದ್ದೇಶಿಸಲಾಗಿದೆ. ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಯೋಜನೆಯಡಿ ಒಟ್ಟು ರೂ. 5,300 ಕೋಟಿ ಅನುದಾನ ಬಿಡುಗಡೆಯಾಗಬೇಕಿದ್ದು, ಅದನ್ನು ನಾವು ಅತ್ಯಂತ ಆಶಾದಾಯಕವಾಗಿ ನಿರೀಕ್ಷಿಸುತ್ತಿದ್ದೇವೆ. ಇದರೊಂದಿಗೆ ರಾಜ್ಯ ಸರ್ಕಾರವೂ ಸಹ ತನ್ನ ಪಾಲಿನಿಂದ ಎಷ್ಟು ಸಾಧ್ಯವೋ ಅಷ್ಟು ಹಣವನ್ನು ಒದಗಿಸಿ, ಕಾಮಗಾರಿಯನ್ನು ಶೀಘ್ರವಾಗಿ ಮುಗಿಸಲು ಸರ್ವ ರೀತಿಯ ವ್ಯವಸ್ಥೆಗಳನ್ನು ಮಾಡುತ್ತಿದೆ ಎಂದು ವಿವರಿಸಿದರು.

ಈಗಾಗಲೇ ಸದನದಲ್ಲಿ ಪ್ರಸ್ತಾಪವಾಗಿರುವಂತೆ 2028ರ ಮಾರ್ಚ್ ವೇಳೆಗೆ ಯೋಜನೆಯನ್ನು ಪೂರ್ಣಗೊಳಿಸಲು ಗಡುವು ನಿಗದಿಪಡಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕಾಮಗಾರಿಗಳನ್ನು ಚುರುಕುಗೊಳಿಸಲು ಎಲ್ಲ ಅಗತ್ಯ ಪ್ರಯತ್ನಗಳನ್ನು ನಡೆಸುವಂತೆ ಸಂಬಂಧಪಟ್ಟ ಸಚಿವರಿಗೆ ನಾವೆಲ್ಲರೂ ಮನವಿ ಮಾಡಿದ್ದೇವೆ. ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಸಕ್ರಿಯ ಸಹಭಾಗಿತ್ವದಲ್ಲಿ ಯೋಜನೆ ಶೀಘ್ರವಾಗಿ ಪೂರ್ಣಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಶಾಸಕರಾದ ಎನ್.ವೈ.ಗೋಪಾಲಕೃಷ್ಣ, ಬಿ.ಜಿ.ಗೋವಿಂದಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯರಾದ ಶ್ರೀನಿವಾಸ, ಕೆ.ಎಸ್.ನವೀನ್, ಆದಿ ಜಾಂಬವ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ರಾಜ್ಯ ದ್ರಾಕ್ಷಾ ರಸ ಮಂಡಳಿ ಅಧ್ಯಕ್ಷ ಡಾ.ಯೋಗೇಶ್ ಬಾಬು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ.ಸಿಇಓ ಡಾ.ಎಸ್.ಆಕಾಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಭದ್ರಾ ಮೇಲ್ದಂಡೆ ಮುಖ್ಯ ಇಂಜಿನಿಯರ್ ರವಿಶಂಕರ್, ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಎಂ.ಚಂದ್ರಪ್ಪ ಸೇರಿದಂತೆ ಮತ್ತಿರರು ಇದ್ದರು.

## ಚರಂಡಿ ಸ್ವಚ್ಛತೆ ನಿರ್ಲಕ್ಷ್ಯ : ಗ್ರಾಮ ಪಂಚಾಯಿತಿ ವಿರುದ್ಧ ಪರಶುರಾಮ ಭಜೇಂತ್ರಿ ಆರೋಪ

■ ಗಣಿನಾಡವಾಣಿ ವಾರ್ತೆ, ಕೊಪ್ಪಳ

ಜಿಲ್ಲೆಯ ಕುಕನೂರು ತಾಲೂಕಿನ ಕುದರಿಮೋತಿ ಗ್ರಾಮದ 3ನೇ ವಾರ್ಡ್‌ನಲ್ಲಿ ಚರಂಡಿಗಳ ಸ್ವಚ್ಛತೆ ಸಮರ್ಪಕವಾಗಿ ನಡೆಯದೆ ದುರ್ವಾಸನೆ ಹಾಗೂ ನೈರ್ಮಲ್ಯ ಸಮಸ್ಯೆ ಉಂಟಾಗಿದೆ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ.



ಸ್ಥಳೀಯ ಮುಖಂಡ ಪರಶುರಾಮ ಭಜೇಂತ್ರಿ ಮಾತನಾಡಿ, ಮೊಹರಂ ಹಬ್ಬದ ಸಂದರ್ಭದಲ್ಲಿ ಗ್ರಾಮವನ್ನು ಸ್ವಚ್ಛವಾಗಿಡಬೇಕಾಗಿದ್ದರೂ 3ನೇ ವಾರ್ಡ್‌ನ ಚರಂಡಿಗಳನ್ನು ಇದುವರೆಗೂ ಸ್ವಚ್ಛಗೊಳಿಸಿಲ್ಲ. ಇದರಿಂದ ಚರಂಡಿಗಳು ಕಸದಿಂದ ತುಂಬಿ, ಕೊಳಚೆ ನೀರು ಹರಿಯುತ್ತಿದ್ದು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ ಎಂದು ಆರೋಪಿಸಿದರು.

ಗ್ರಾಮ ಪಂಚಾಯಿತಿ ಅಧಿಕಾರಿಗಳು ಕೂಡಲೇ ಈ ಸಮಸ್ಯೆಯತ್ತ ಗಮನಹರಿಸಿ ಚರಂಡಿಗಳ ಸ್ವಚ್ಛತೆ ಕೈಗೊಳ್ಳಬೇಕು. ಇಲ್ಲವಾದಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಆತಂಕವಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು 3ನೇ ವಾರ್ಡ್‌ನ ಚರಂಡಿಗಳನ್ನು ಸ್ವಚ್ಛಗೊಳಿಸಿ ಸಾರ್ವಜನಿಕರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಎಸ್‌ಐಆರ್ ಪರಿಶೀಲನೆ ಪೂರ್ಣಗೊಳಿಸಿದ ಕಾಂಗ್ರೆಸ್ ಮುಖಂಡ ವೆಂಕಟೇಶ್ ಹೆಗಡೆ

■ ಗಣಿನಾಡವಾಣಿ ವಾರ್ತೆ, ಬಳ್ಳಾರಿ

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಅಂಗವಾಗಿ ಬಳ್ಳಾರಿ ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ 07ರ ಬಾಪೂಜಿನಗರ ನಿವಾಸಿ ಹಾಗೂ ಕಾಂಗ್ರೆಸ್ ಪಕ್ಷದ ರಾಜ್ಯ ಮಾಧ್ಯಮ ವಕ್ತಾರ ವಕೀಲ ವೆಂಕಟೇಶ್ ಹೆಗಡೆ ಅವರು ತಮ್ಮ ಮತದಾರರ ಪರಿಶೀಲನೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದರು.



ಈ ಸಂದರ್ಭದಲ್ಲಿ ಬಿಎಲ್‌ಒ ಅಧಿಕಾರಿಗಳಿಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಪರಿಶೀಲನೆ ಕಾರ್ಯಕ್ಕೆ ಸಹಕರಿಸಿದ ಅವರು, ಪ್ರತಿಯೊಬ್ಬ ಅರ್ಹ ಮತದಾರರೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ ತಮ್ಮ ಮತದಾನದ ಹಕ್ಕನ್ನು ಭದ್ರಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

"ನನ್ನ ಮತ, ನನ್ನ ಹಕ್ಕು. ನಾನು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ ನನ್ನ ಕರ್ತವ್ಯವನ್ನು ನಿಭಾಯಿಸಿದ್ದೇನೆ. ಪ್ರತಿಯೊಬ್ಬ ಅರ್ಹ ಮತದಾರರೂ ಬಿಎಲ್‌ಒಗಳಿಗೆ ಸಹಕರಿಸಿ ತಮ್ಮ ಮತದಾನದ ಹಕ್ಕನ್ನು ಸಂರಕ್ಷಿಸಿಕೊಳ್ಳಬೇಕು" ಎಂದು ವೆಂಕಟೇಶ್ ಹೆಗಡೆ ಹೇಳಿದರು.

ಈ ಸಂದರ್ಭದಲ್ಲಿ ಬಿಎಲ್‌ಒ ಸಿಬ್ಬಂದಿ ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

## ರೈತರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿ ಬ್ಯಾಂಕ್‌ಗಳ ಪಾತ್ರ ಮಹತ್ವದ್ದು

■ ಗಣಿನಾಡವಾಣಿ ವಾರ್ತೆ, ಚಿತ್ರದುರ್ಗ

ರೈತರಅಭಿವೃದ್ಧಿಗಾಗಿ ಸ್ಥಾಪನೆಯಾಗಿರುವ ಪ್ರಾಥಮಿಕ ಸಹಕಾರಿ ಕೃಷಿ ಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕ್‌ಗಳು ರೈತರಆರ್ಥಿಕ ಸದೃಢತೆಗೆ ಪ್ರಮುಖಆಧಾರವಾಗಿದ್ದು, ಬ್ಯಾಂಕ್‌ಗಳ ಲಾಭಾಂಶ ಮತ್ತು ವಿವಿಧ ಸಾಲ ಸೌಲಭ್ಯಗಳಿಂದ ರೈತರಿಗೆ ಹೆಚ್ಚಿನ ಅನುಕೂಲವಾಗುತ್ತಿದೆಎಂದು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಹೇಳಿದರು.



ನಗರದ ಎಬಿಸಿ ಬುಕ್ ಸೆಂಟರ್ ಸಮೀಪದ ಪ್ರಾಥಮಿಕ ಸಹಕಾರಿ ಕೃಷಿ ಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕ್ ನಿಗಮದ ನವೀಕೃತಕಟ್ಟಡಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಹಕಾರಿ ಬ್ಯಾಂಕ್‌ಗಳು ರೈತರಿಗೆಕಡಿಮೆ ಬಡ್ಡಿದರದಲ್ಲಿ ಕೃಷಿ ಸಾಲ, ಕೃಷಿ ಯಂತ್ರೋಪಕರಣಗಳ ಖರೀದಿ ಸೇರಿದಂತೆ ವಿವಿಧ ಕೃಷಿ ಚಟುವಟಿಕೆಗಳಿಗೆ ಅಗತ್ಯಆರ್ಥಿಕ ನೆರವುಒದಗಿಸುತ್ತಿವೆ. ಇದರಿಂದರೈತರು ಖಾಸಗಿ ಸಾಲದ ಅವಲಂಬನೆಯಿಂದ ಹೊರಬಂದು ಸ್ವಾವಲಂಬಿ ಜೀವನ ನಡೆಸಲು ಸಾಧ್ಯವಾಗುತ್ತಿದೆಎಂದು ಹೇಳಿದರು.

ಪ್ರಾಥಮಿಕಸಹಕಾರಿಕೃಷಿಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕ್‌ಗಳು ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸುತ್ತಿದ್ದು, ಗ್ರಾಮೀಣಆರ್ಥಿಕತೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಬ್ಯಾಂಕ್‌ನ ಸದಸ್ಯತ್ವ ಪಡೆದುಅದರ ವಿವಿಧ ಯೋಜನೆಗಳು ಹಾಗೂ ಸಾಲ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದುಕರೆ ನೀಡಿದರು.

ಸರ್ಕಾರವೂ ಸಹಕಾರಿಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಜಾರಿಗೆತಂದಿದ್ದು, ರೈತರಿಗೆ ಅಗತ್ಯವಿರುವಎಲ್ಲಾರೀತಿಯ ಸಹಕಾರವನ್ನು ನೀಡಲು ಬದ್ಧವಾಗಿದೆ, ಹಾಗೂ ಪ್ರಾಥಮಿಕ ಸಹಕಾರಿ ಕೃಷಿ ಅಭಿವೃದ್ಧಿಗೆ ಶಾಸಕರಿಂದ 10 ಲಕ್ಷಅನುದಾನವನ್ನುಕೂಡ ಸ್ಥಳದಲ್ಲಿ ಘೋಷಣೆ ಮಾಡಿದರು.

ಪ್ರಾಥಮಿಕಸಹಕಾರಿಕೃಷಿಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕಿನ ನಿರ್ದೇಶಕರಾದಜೆ ಶಿವಪ್ರಕಾಶ್ ಮಾತನಾಡಿ ಸ್ವತಂತ್ರ ಪೂರ್ವದಲ್ಲಿಚಿತ್ರದುರ್ಗದಲ್ಲಿ ಪ್ರಾಥಮಿಕ ಸಹಕಾರಿ ಕೃಷಿ ಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕ್ ಸ್ಥಾಪನೆಯಾಗಿತ್ತು.ಕೆಂಗಲ್ ಹನುಮಂತಯ್ಯ ನವರು ಈ ಒಂದು ಸಂಘಕ್ಕೆ ಅಡಿಪಾಯವನ್ನು ಹಾಕಿದ್ದಾರೆಜೊತೆಗೆರೈತರಿಗೆ ಅನುಕೂಲವಾಗಬೇಕೆನ್ನುವ ನಿಟ್ಟಿನಲ್ಲಿ ಸಾಕಷ್ಟು ಯೋಜನೆಗಳನ್ನು ರೂಪಿಸಿ ರೈತರದೂರದೃಷ್ಟಿಯನನ್ನಿಟ್ಟುಕೊಂಡು ಸಾಲ ಸೌಲಭ್ಯದ ವ್ಯವಸ್ಥೆಯನ್ನುಕಲ್ಪಿಸಲಾಗಿದೆಇದರ ಲಾಭಾಂಶದಿಂದಲೇರೈತರಿಗೆ ಮತ್ತಷ್ಟು ಅನುಕೂಲ ಆಗಬೇಕೆನ್ನುವ ನಿಟ್ಟಿನಲ್ಲಿ ಬೇರೆ ಬೇರೆ ಮೊಳಕೆಗಳನ್ನು ತೆರೆದು ಬರುವಂತಹ ಲಾಭಗಳಿಂದ ರೈತರಿಗೆ ಸಾಲದ ಮುಖಾಂತರಆರ್ಥಿಕವಾಗಿಅಭಿವೃದ್ಧಿಸಲು ಸಹಕಾರಿಯಾಗಿದೆಎಂದು ತಿಳಿಸಿದರು,

ಪ್ರಾಥಮಿಕಸಹಕಾರಿಕೃಷಿಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕಿನ ಆಡಳಿತ ಅಧಿಕಾರಿಗಳು ಸಂಪೂರ್ಣ ಬೆಂಬಲದೊಂದಿಗೆಚಿತ್ರದುರ್ಗ ಪ್ರಾಥಮಿಕ ಸಹಕಾರಿ ಕೃಷಿ ಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕು, ಉತ್ತಮ ಲಾಭಾಂಶದಲ್ಲಿ ಮುಂದೆ ಸಾಗುತ್ತಿದೆಇದರಿಂದ ನೇರವಾಗಿರೈತರಿಗೆ ಸಾಕಷ್ಟು ಬೇರೆ ಬೇರೆರೂಪದಲ್ಲಿಆಗುತ್ತಿದೆಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಪ್ರಾಥಮಿಕ ಸಹಕಾರ ಕೃಷಿ ಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕ್ ನ ಅಧ್ಯಕ್ಷರಾದ ಪಿ.ಜೆ ಶಿವಪ್ರಸಾದ್, ಉಪಾಧ್ಯಕ್ಷರಾದಎಂಎಸ್ ಶರಣಪ್ಪ, ನಿರ್ದೇಶಕರಾದರವಿ ಜಗದೀಶ್ ವಿಜಯಕುಮಾರ್ ಸತೀಶ್ ಮಾರುತಿ ಮೌನೇಶ್‌ಕೊಟ್ರೇಶ್ ಪದ್ಮ ವನಜಾಕ್ಷಮ್ಮ ಸುನಿಲ್ ನಾಗಪ್ಪ ಹಾಗೂ ಸರ್ಕಾರಿ ನಾಮ ನಿರ್ದೇಶಕರಾದ ನಿರಂಜನ್ ಮೂರ್ತಿ ಹಾಗೂ ಇತರರುಇದ್ದರು.

GANINAADA VAANI KANNADA DAILY MORNING OWNER , PUBLISHER, PRINTED BY Editor name : A.K.MALLIKARJUNA: HOUSE NO 84, WARD NO 22, MAHANANDI KOTTAM STREET, TALURU ROAD, AMBEDKARNAGAR, GANDHI NAGAR, BELLARY, KARNATAKA - 583101. Printed at PENNAOBALESHWARA ENTERPRISES#237, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583113.